ಸಂಪುಟ : 11 ಸಂಚಿಕೆ: 02 ಪುಟ : 4+2 ಬೆಲೆ: 3.00 ಮಂಗಳವಾರ ಜನವರಿ 27 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 02 Pages : 4+2 Price : 3.00 Tuesday January 27 2026 Gadag RNI No: KARKAN/2015/63412 E-mail: vijayasakshidaily@gmail.com Post Regn.No: GDG/72/2023-25

### 77ನೇ ಗಣರಾಜ್ಯೋತ್ಸ ದಿನಾಚರಣೆಯಲ್ಲಿ ಸಾರ್ವಜನಿಕ ಧ್ವಜಾರೋಹಣ ನೆರವೇರಿಸಿದ ಸಚಿವ ಎಚ್.ಕೆ. ಪಾಟೀಲ

# ಪರಿಪೂರ್ಣವಾದ ಸಂವಿಧಾನದ ಪಾಲನೆಗೆ ಮುಂದಾಗಿ



ಬಂಡವಾಳಶಾಹಿಗಳ ಹಿತಾಸಕ್ತಿಯನ್ನು ಕಾಪಾಡುವ ಗುತ್ತಿಗೆದಾರರ ಕೇಂದ್ರೀಕೃತ ವಿಬಿಜಿ ಗ್ರಾಮಜಿ ಯೋಜನೆ ಹೆಸರಿನಲ್ಲಿ ಗ್ರಾಮೀಣ ಹಿತಾಸಕ್ತಿಯನ್ನು ಗಾಳಿಗೆ ತೂರಲಾಗಿದೆ. ಇದರಿಂದಾಗಿ ಗ್ರಾಮೀಣ ಆಸ್ತಿ ಸೃಜನೆಯ ಮೇಲೆ ಮತ್ತು ಕೂಲಿಕಾರರು ಅವರು ಇರುವ ಸ್ಥಳಗಳಲ್ಲಿಯೇ ಉದ್ಯೋಗ ಒದಗಿಸಬೇಕೆಂಬ ಘನವಾದ ಉದಾತ್ತ ಉದ್ದೇಶಗಳಿಗಾಗಿ ಕೇಂದ್ರ ಸರ್ಕಾರಕ್ಕೆ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾನೂನು ಪುನಃ ಸ್ಥಾಪನೆ ಮಾಡುವಂತೆ ಕರ್ನಾಟಕ ರಾಜ್ಯ ಒತ್ತಾಯಿಸುತ್ತಿದೆ. ಬಡವರ, ಕೃಷಿ ಕಾರ್ಮಿಕರ ಪರವಾದ ಗ್ರಾಮೀಣ ಆಸ್ತಿ ಸೃಜನೆಗೆ ಬಹುದೊಡ್ಡ ಅವಕಾಶ ಕಲ್ಪಿಸುವ, ನಿರುದ್ಯೋಗಿ ಭತ್ಯೆ ಒದಗಿಸುವ, ಕಾರ್ಮಿಕರು ಅವರಿರುವ ಸ್ಥಳದಲ್ಲಿಯೇ ಕೆಲಸ ಒದಗಿಸುವ 'ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಕಾನೂನ'ನ್ನು ಮರು ಸ್ಥಾಪಿಸಬೇಕೆಂದು ನಮ್ಮ ಸರ್ಕಾರ ಕೇಂದ್ರವನ್ನು ಒತ್ತಾಯಿಸುತ್ತದೆ ಎಂದು ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.



**■ವಿಜಯಸಾಕ್ಷಿ ಸುದ್ದಿ, ಗದಗ**

ಪ್ರಜಾಪ್ರಭುತ್ವದ ಮೌಲ್ಯಗಳಾದ ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯ ನ್ಯಾಯ, ವಿಚಾರ, ಅಭಿವ್ಯಕ್ತಿ, ನಂಬಿಕೆ, ಧರ್ಮ ಮತ್ತು ಉಪಾಸನೆಯ ಸ್ವಾತಂತ್ರ್ಯ, ಸ್ಥಾನಮಾನ ಮತ್ತು ಅವಕಾಶಗಳ ಸಮಾನತೆ ದೊರೆಯುವಂತೆ ಮಾಡುವುದಕ್ಕಾಗಿ ವ್ಯಕ್ತಿಗೌರವ, ದೇಶದ ಏಕತೆ ಮತ್ತು ಸಮಗ್ರತೆಗಾಗಿ ಎಲ್ಲರಲ್ಲಿ ಭ್ರಾತೃತ್ವ ಭಾವನೆಯನ್ನು ಮೂಡಿಸುವುದಕ್ಕಾಗಿ ದೃಢಸಂಕಲ್ಪ ಮಾಡಿ, ನಮ್ಮ ಸಂವಿಧಾನ ಸಭೆಯಲ್ಲಿ 1949ರ ನವೆಂಬರ್ 26ರಂದು ಈ ಸಂವಿಧಾನವನ್ನು ನಮಗೆ ನಾವೇ ಅರ್ಪಿಸಿಕೊಂಡು ಅಂಗೀಕರಿಸಿ ಶಾಸನವಾಗಿ ವಿಧಿಸಿಕೊಂಡಿದ್ದೇವೆ ಎಂದು ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ನುಡಿದರು.

ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತದಿಂದ ಸೋಮವಾರ ಜರುಗಿದ ಗಣರಾಜ್ಯೋತ್ಸ ದಿನಾಚರಣೆ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಸಂವಿಧಾನದ ರಕ್ಷಕರಾಗಿರುವ, ಉನ್ನತ ಹುದ್ದೆ ಅಲಂಕರಿಸಿ ಸಂವಿಧಾನದ ಅಡಿಯಲ್ಲಿ ಪ್ರಮಾಣ ವಚನ ಸ್ವೀಕರಿಸಿರುವ ನಮ್ಮ ದೇಶದ ಜವಾಬ್ದಾರಿಯುತರು ತಮ್ಮ ಮನಸೋ ಇಚ್ಛೆಯಂತೆ ಅದನ್ನು ಅರ್ಥೈಸಿ ಅಗೌರವಿಸುವ, ಸಂವಿಧಾನವನ್ನು ಉಲ್ಲಂಘಿಸುವ ಕೆಲಸ ನಡೆಯುತ್ತಿರುವುದು ಅತ್ಯಂತ ವಿಷಾದದ ಸಂಗತಿ. ಸಂವಿಧಾನದ ಅಡಿಯಲ್ಲಿ ಕಾರ್ಯನಿರ್ವಹಿಸುವ ಸಂದರ್ಭದಲ್ಲಿ ಅತ್ಯಂತ ಸೂಕ್ಷ್ಮವಾದ ಮತ್ತು ಗಂಭೀರವಾದ ವಿಷಯಗಳನ್ನು ಶಾಸನಸಭೆಗಳಲ್ಲೂ ಸಹ ಗಮನಿಸದೇ ಕೇವಲ ತಮ್ಮ ರಾಜಕೀಯ ನಿಲುವುಗಳಿಗೆ ಪೂರಕವಾಗಿ ವ್ಯಾಖ್ಯಾನಿಸುತ್ತಿರುವುದು ಕಳವಳಕಾರಿಯಾಗಿದೆ ಎಂದರು.

ರಾಜ್ಯದಿಂದ ಹೆಚ್ಚಿನ ತೆ-ರಿಗೆ ಕೊಡುಗೆಯನ್ನು ಕೇಂದ್ರಕ್ಕೆ ನೀಡುತ್ತಿದ್ದರೂ ಅತ್ಯಂತ ಕನಿಷ್ಠ ನೆರವುನಮಗೆ ಹರಿದುಬರುತ್ತಿದೆ.

▶▶3ನೇ ಪುಟಕ್ಕೆ

### ತಾಲೂಕಾ ಕ್ರೀಡಾಂಗಣದಲ್ಲಿ ಜರುಗಿದ 77ನೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಶಾಸಕ ಜಿ.ಎಸ್. ಪಾಟೀಲ

## ಸಂವಿಧಾನ ಉಳಿದರಷ್ಟೇ ಪ್ರಜಾಪ್ರಭುತ್ವ ಉಳಿಯಲು ಸಾಧ್ಯ




ರೋಣ ಮತಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನಿಡಲಾಗಿದೆ. 50 ಕೋಟಿ ರೂಗಳ ವೆಚ್ಚದಲ್ಲಿ ಜೆಟಿಟಿಸಿ ಕಾಲೇಜನ್ನು ಆರಂಭಿಸಲಾಗಿದ್ದು, ಬೃಹತ್ ಕಟ್ಟಡ ನಿರ್ಮಾಣ ಕಾರ್ಯ ನಡೆದಿದೆ. ರೋಣ ತಾಲೂಕು ಅನ್ನದಾತ ರೈತರನ್ನು ಹೆಚ್ಚಾಗಿ ಹೊಂದಿದೆ. ಇದನ್ನು ಮನಗಂಡು ಕೋಲ್ಡ್ ಸ್ಟೋರೇಜ್ ನಿರ್ಮಾಣಕ್ಕೆ ಮುಂದಾಗಿದ್ದು, ಜಿಗಳೂರ ಕೆರೆಗೆ ನೀರನ್ನು ತುಂಬಿಸಲು ಅಗತ್ಯ ಕ್ರಮ ಕೈಗೊಳ್ಳಲಾಗಿದೆ. ಕೆರೆಯ ಅಂದವನ್ನು ಹೆಚ್ಚಿಸಲು 5 ಕೋಟಿ ರೂ ವೆಚ್ಚದಲ್ಲಿ ಸಾಲು ಮರದ ತಿಮ್ಮಕ್ಕ ವೃಕ್ಷೋದ್ಯಾನವನ ನಿರ್ಮಾಣ ಕಾರ್ಯ ಭರದಿಂದ ಸಾಗಿದೆ ಎಂದು ಶಾಸಕ ಜಿ.ಎಸ್. ಪಾಟೀಲ ತಿಳಿಸಿದರು.

**■ವಿಜಯಸಾಕ್ಷಿ ಸುದ್ದಿ, ರೋಣ**

ಇತ್ತೀಚಿನ ದಿನಗಳಲ್ಲಿ ಸಂವಿಧಾನ ಬದಲಾವಣೆ ಕುರಿತು ಕೆಲವರು ಮಾತನಾಡುತ್ತಾರೆ. ಆದರೆ ಸಂವಿಧಾನ ಉಳಿದರೆ ಮಾತ್ರ ಪ್ರಜಾಪ್ರಭುತ್ವ ಉಳಿಯಲಿದೆ ಎಂಬ ಸತ್ಯವನ್ನು ಅವರು ಮರೆತಿದ್ದಾರೆ ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷ, ಶಾಸಕರಾದ ಜಿ.ಎಸ್. ಪಾಟೀಲ ಅಭಿಪ್ರಾಯಪಟ್ಟರು.

ಅವರು ಸೋಮವಾರ ತಾಲೂಕಾ ಕ್ರೀಡಾಂಗಣದಲ್ಲಿ ತಾಲೂಕಾಡಳಿತದ ವತಿಯಿಂದ ಜರುಗಿದ 77ನೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಸಂವಿಧಾನ ಭಾರತ ದೇಶದ ಅತ್ಯಂತ ದೊಡ್ಡ ಶಕ್ತಿಯಾಗಿದೆ. ಇಡೀ ವಿಶ್ವದಲ್ಲಿ ಭಾರತ ದೇಶದ ಸಂವಿಧಾನ ಮಾದರಿಯಾಗಿದೆ. ಇಂದಿನ ಯುವ ಪೀಳಿಗೆ ಡಾ. ಬಿ.ಆರ್. ಅಂಬೇಡ್ಕರರು ದೇಶದ ಬಗ್ಗೆ ಇಟ್ಟುಕೊಂಡ ಚಿಂತನೆಗಳನ್ನು ಮೆಲುಕು ಹಾಕಬೇಕು. ಮುಖ್ಯವಾಗಿ, ದೇಶದ ಹಿತಕ್ಕಾಗಿ ತಮ್ಮನ್ನು ತಾವು ಸಮರ್ಪಿಸಿಕೊಂಡ ಮಹನೀಯರ ಬಗ್ಗೆ ತಿಳಿದುಕೊಳ್ಳಬೇಕು. ಅಂದಾಗ ಮಾತ್ರ ಸಂವಿಧಾನದ ಮಹತ್ವ ತಿಳಿಯಲಿದೆ ಎಂದರು. ಮತಕ್ಷೇತ್ರದ ಸಂಪೂರ್ಣ ಅಭಿವೃದ್ಧಿಯನ್ನು ಗಮನ ದಲ್ಲಿಟ್ಟುಕೊಂಡು ಕೆಲಸ ನಿರ್ವಹಿಸಲಾಗುತ್ತಿದೆ. ಗ್ರಾಮೀಣ ಭಾಗಗಳಲ್ಲಿ ಉತ್ತಮ ರಸ್ತೆ ಸಂಪರ್ಕ, ಕುಡಿಯುವ ನೀರು, ಆರೋಗ್ಯ, ಶಿಕ್ಷಣಕ್ಕೆ ಹೆಚ್ಚಿನ ಒತ್ತನ್ನು ನೀಡಲಾಗುತ್ತಿದೆ.

ರೋಣ, ಗಜೇಂದ್ರಗಡ, ನರೇಗಲ್ಲ ಪಟ್ಟಣಗಳ ಅಭಿವೃದ್ಧಿ ಕಾರ್ಯಗಳಿಗೆ ವಿಶೇಷ ಅನುದಾನವನ್ನು ನೀಡಲಾಗಿದ್ದು, ರೋಣ ಪಟ್ಟಣಕ್ಕೆ ಡಿಪ್ಲೋಮಾ ಕಾಲೇಜನ್ನು ತರುವ ಮೂಲಕ ವಿದ್ಯಾರ್ಥಿಗಳಿಗೆ ಅನುಕೂಲ ಕಲ್ಪಿಸಲಾಗುವುದು ಎಂದರು.

ತಹಸೀಲ್ದಾರ ನಾಗರಾಜ ಕೆ ಧ್ವಜಾರೋಹಣ ನೆರವೇರಿಸಿದರು. ತಾ.ಪಂ ಇಒ ಚಂದ್ರಶೇಖರ ಕಂದಕೂರ, ಸಿಪಿಐ ವಿಜಯಕುಮಾರ, ಕೃಷಿ ಇಲಾಖೆಯ ಎಸ್.ಎಫ್. ತಹಸೀಲ್ದಾರ, ಪಿಎಸ್‌ಐ ಪ್ರಕಾಶ ಬಣಕಾರ, ಮುಖ್ಯಾಧಿಕಾರಿ ರಮೇಶ ಹೊಸಮನಿ, ಮಲ್ಲಿಕಾರ್ಜುನ ಹುಣಸಿ, ಬಿಇಒ ಅರ್ಜುನ ಕಂಬೋಗಿ, ಅಕ್ಷರದಾಸೋಹಾಧಿಕಾರಿ ಕೆ.ಎಲ್. ನಾಯಕ, ಸಂಜಯ ದೊಡ್ಡಮನಿ ಸೇರಿದಂತೆ ಮುಖಂಡರು ಮತ್ತು ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ಜಿಲ್ಲಾಡಳಿತ ಭವನದಲ್ಲಿ ಹುತಾತ್ಮ ದಿನಾಚರಣೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಹುತಾತ್ಮ ದಿನಾಚರಣೆ ಅಂಗವಾಗಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅವರ ಭಾವಚಿತ್ರಕ್ಕೆ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಜಿಲ್ಲಾಡಳಿತ ಭವನದ ಅಡಿಟೋರಿಯಂ ಹಾಲ್‌ನಲ್ಲಿ ಪುಷ್ಪನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ತಾಲೂಕಾಧ್ಯಕ್ಷ ಅಶೋಕ ಮಂದಾಲಿ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಅಪರ ಜಿಲ್ಲಾಧಿಕಾರಿ ದುರಗೇಶ ಕೆ.ಆರ್, ಶರಣು ಗೋಗೇರಿ ಸೇರಿದಂತೆ ಗಣ್ಯರು, ಮುಖಂಡರು ಉಪಸ್ಥಿತರಿದ್ದರು.

## ಕಾರ್ಯ ನಿರ್ವಹಣೆಯಲ್ಲಿ ಮಾನವೀಯತೆಯಿರಲಿ



**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತದಲ್ಲಿ ಗಣರಾಜ್ಯೋತ್ಸವ ದಿನಾಚರಣೆಯನ್ನು ವಿಜೃಂಭಣೆಯಿಂದ ಆಚರಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅವರು ಧ್ವಜಾರೋಹಣ ನೆರವೇರಿಸಿ, ಸಂವಿಧಾನದ ಮಹತ್ವ ಮತ್ತು ಸರ್ಕಾರಿ ನೌಕರರ ಕರ್ತವ್ಯಗಳ ಕುರಿತು ಮಹತ್ವದ ಸಂದೇಶ ನೀಡಿದರು.

ನಾವು ಕಾನೂನು ಹಾಕಿಕೊಂಡು ನಡೆಯುತ್ತಿರುವವರು. ನಾವು ಹೇಗೆ ಕಾನೂನಾತ್ಮಕವಾಗಿ ಬದುಕಬೇಕು ಎಂಬುದನ್ನು ಸಂವಿಧಾನ ನಮಗೆ ತಿಳಿಸುತ್ತದೆ. ವೇದಗಳಲ್ಲಿ ಜೀವನದ ಸಾರಾಂಶ ಇರುವಂತೆ, ಸಂವಿಧಾನದಲ್ಲೂ ನಮ್ಮ ಜೀವನದ ಮೌಲ್ಯಗಳು ಅಡಗಿವೆ ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ವ್ಯವಸ್ಥೆಯಲ್ಲಿ ಸರ್ಕಾರದ ಆಶಯಗಳನ್ನು ಕಾರ್ಯರೂಪಕ್ಕೆ ತರುವ ಜವಾಬ್ದಾರಿ ಕಾರ್ಯಾಂಗದ ಮೇಲಿದೆ. ನಾವು ಸರ್ಕಾರ ಮತ್ತು ಸಾರ್ವಜನಿಕರ ನಡುವಿನ ಕೊಂಡಿಯಾಗಿ ಕಾರ್ಯನಿರ್ವಹಿಸುತ್ತೇವೆ. ಅಧಿಕಾರಿಗಳು ತಮ್ಮ ಕಾರ್ಯನಿರ್ವಹಣೆಯಲ್ಲಿ ಮಾನವೀಯತೆಯನ್ನು ಅಳವಡಿಸಿಕೊಂಡು, ಸಾರ್ವಜನಿಕರಿಗೆ ಸಹಾಯ ಮಾಡಬೇಕು. ನೌಕರಿಯಲ್ಲಿ ಅಹಂ ಹಾಗೂ ಜಂಭ ಬೇಡ. ನಾಗರಿಕರ ಸಮಸ್ಯೆಗಳನ್ನು ಸಮಾಧಾನದಿಂದ ಆಲಿಸಿ ಪರಿಹಾರ ಒದಗಿಸುವ ಮನೋಭಾವ ಇರಬೇಕು ಎಂದು ಸಲಹೆ ನೀಡಿದರು.

ಕಾನೂನು ಜಾರಿ ಮಾಡುವವರು ನಾವೇ ಆಗಿರುವುದರಿಂದ, ಕಾನೂನಿಗೆ ಮಾನವೀಯತೆಯ ನೆಲೆ ಸೇರಿಸಿ ಕಾರ್ಯನಿರ್ವಹಿಸಬೇಕು. ನಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಮಾನವೀಯತೆಯನ್ನು ಮೈಗೂಡಿಸಿಕೊಂಡು ಜನಸೇವೆ ಮಾಡೋಣ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

### ಲಕ್ಕುಂಡಿ ಪಾರಂಪರಿಕ ಪ್ರದೇಶವನ್ನು ಯುನೆಸ್ಕೋ ಪಟ್ಟಿ ಸೇರಿಸಲು ಪ್ರಸ್ತಾವನೆ; ಸಚಿವ ಎಚ್.ಕೆ. ಪಾಟೀಲ

## 10.16 ಕೋಟಿ ರೂ ವೆಚ್ಚದಲ್ಲಿ 6 ಸ್ಮಾರಕಗಳ ಸಂರಕ್ಷಣೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯ ಲಕ್ಕುಂಡಿಯನ್ನು ವಿಶ್ವಪರಂಪರೆ ತಾತ್ಕಾಲಿಕ ತಾಣಗಳ ಪಟ್ಟಿಗೆ ಸೇರ್ಪಡೆಗೊಳಿಸಲು ನಾಮನಿರ್ದೇಶನ ಪ್ರಸ್ತಾವನೆಯನ್ನು ಸಿದ್ಧಪಡಿಸುತ್ತಿದ್ದು, ಸರ್ಕಾರದ ಅನುಮೋದನೆಯೊಂದಿಗೆ ಭಾರತೀಯ ಪುರಾತತ್ವ ಸರ್ವೇಕ್ಷಣೆ ಇಲಾಖೆ ಮುಖಾಂತರ ಸ್ಮಾರಕಗಳು ಮತ್ತು ಸೈಟ್‌ಗಳ ಇಂಟರ್‌ನ್ಯಾಷನಲ್ ಕೌನ್ಸಿಲ್‌ಗೆ ಸಲ್ಲಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತದಿಂದ ಸೋಮವಾರದಂದು ಜರುಗಿದ ಗಣರಾಜ್ಯೋತ್ಸ ದಿನಾಚರಣೆ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.



ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ವಿವಿಧ ಕಾಮಗಾರಿಗಳಿಗೆ ಸಂಬಂಧಿಸಿದಂತೆ, 2021-22ನೇ ಸಾಲಿನ ಕರ್ನಾಟಕ ನೀರಾವರಿ ನಿಗಮ ಹಾಗೂ ಮಾನ್ಯ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ವಾರ್ಡ್ ನಂ.17 ಮತ್ತು 18ರ ಮಧ್ಯದಲ್ಲಿ ಹರಿಯುವ ರಾಜ ಕಾಲುವೆಯ ಮೇಲೆ ಇಂದಿರಾ ವನ ನಿರ್ಮಾಣ ಮಾಡಲಾಗಿದೆ. ನಗರಸಭೆ ವ್ಯಾಪ್ತಿಯಲ್ಲಿ ವಸತಿ ರಹಿತಿ ಫಲಾನುಭವಿಗಳಿಗೆ ಎ.ಎಚ್.ಪಿ ಯೋಜನೆಯಡಿಯಲ್ಲಿ ಒಟ್ಟು 71 ಎಕರೆ ಜಮಿನಿನಲ್ಲಿ 3630 ಮನೆಗಳಲ್ಲಿ 205 ಮನೆಗಳು ಹಂಚಿಕೆ ಮಾಡಲಾಗಿದೆ. ಪ್ರಸ್ತುತ 774 ಮನೆಗಳು ಪೂರ್ಣಗೊಳ್ಳುವ ಹಂತದಲ್ಲಿದ್ದು, 2606 ಮನೆಗಳು ವಿವಿಧ ಹಂತದಲ್ಲಿ ಪ್ರಗತಿಯಲ್ಲಿವೆ ಎಂದು ಸಚಿವ ಎಚ್.ಕೆ. ಪಾಟೀಲ ತಿಳಿಸಿದರು.

ಚಾಲುಕ್ಯ ಸಾಮ್ರಾಜ್ಯದ ರಾಜಧಾನಿ, ಕನ್ನಡ ಸಾಹಿತ್ಯ ಪೋಷಕಿಯಾಗಿದ್ದ ದಾನಚಿಂತಾಮಣಿ ಅತ್ತಿಮಬ್ಬೆಯವರ ಸ್ಥಳವಾದ ಗದಗ ಜಿಲ್ಲೆ ಲಕ್ಕುಂಡಿ ಗ್ರಾಮವು ಐತಿಹಾಸಿಕ ಪಾರಂಪರಿಕ ಪ್ರದೇಶವಾಗಿದ್ದು, ಈ ಪಾರಂಪರಿಕ ಗ್ರಾಮದಲ್ಲಿರುವ ಸ್ಮಾರಕಗಳು, ದೇವಾಲಯಗಳು, ಬಾವಿಗಳು, ಶಾಸನಗಳ ಸಂರಕ್ಷಣೆಗಾಗಿ ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರವನ್ನು ಸ್ಥಾಪಿಸಲಾಗಿದ್ದು, ಈ ಪ್ರಾಧಿಕಾರದ ಮುಖಾಂತರ ಹಲವು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಮನೆಯ ಅಡಿಪಾಯ ತೆಗೆಯುವ ಸಂದರ್ಭದಲ್ಲಿ ದೊರೆತ ಬೆಲೆಬಾಳುವ ಚಿನ್ನಾಭರಣಗಳನ್ನು ಜಿಲ್ಲಾಡಳಿತಕ್ಕೆ ಹಸ್ತಾಂತರಿಸಿದ ಬಾಲಕನ ಪ್ರಾಮಾಣಿಕತೆಯನ್ನು ರಾಜ್ಯ ಸರ್ಕಾರ ಮತ್ತು ಜಿಲ್ಲಾಡಳಿತ ಮೆಚ್ಚಿಕೊಂಡಿದ್ದು, ಅವರ ಕುಟುಂಬಕ್ಕೆ ಕಾನೂನು ಪ್ರಕಾರ ಸಿಗಬೇಕಾದ ಎಲ್ಲ ಪರಿಹಾರ ಮತ್ತು ಸೌಲಭ್ಯಗಳನ್ನು ಒದಗಿಸಲು ಪ್ರಾಮಾಣಿಕವಾಗಿ ಕ್ರಮ ಕೈಗೊಳ್ಳಲಾಗುವುದು ಎಂದರು.

ಪ್ರಸಕ್ತ ಸಾಲಿನಲ್ಲಿ ಲಕ್ಕುಂಡಿ ಪಾರಂಪರಿಕ ಶ್ರೀ ವಿರೂಪಾಕ್ಷ ದೇವಾಲಯ ಸಂರಕ್ಷಣೆ, ಶ್ರೀ ಮಲ್ಲಿಕಾರ್ಜುನ ದೇವಾಲಯ ಹಾಗೂ ಗದ್ದುಗೆ ಸಂರಕ್ಷಣೆ, ಶ್ರೀ ಚಂದ್ರಮೌಳೇಶ್ವರ ದೇವಾಲಯ ಸಂರಕ್ಷಣೆ, ಶ್ರೀ ಹಾಲಗುಂಡಿ ಬಸವಣ್ಣ ದೇವಾಲಯ ಸಂರಕ್ಷಣೆ ಕಾಮಗಾರಿ, ಶ್ರೀ ಕಣ್ಣರ ಭಾವಿ ಸಂರಕ್ಷಣೆ ಕಾಮಗಾರಿ, ಶ್ರೀ ಕಲ್ಮಠ ಭಾವಿ ಹಾಗೂ ಕಂಪೌಂಡ್ ಗೋಡೆ ಕಾಮಗಾರಿಗಳಿಗೆ ರೂ.10.16 ಕೋಟಿ ವೆಚ್ಚದಲ್ಲಿ ಸಂರಕ್ಷಣೆ ಕಾಮಗಾರಿ ಕೈಗೊಂಡು ಸ್ಮಾರಕಗಳ ಸಂರಕ್ಷಣೆಗೆ ರಾಜ್ಯ ಸರ್ಕಾರ ಮುಂದಾಗಿದೆ ಎಂದು ಸಚಿವರು ತಿಳಿಸಿದರು.

ಶಿರಹಟ್ಟಿ ತಾಲೂಕಿನ ಶ್ರೀ ಹೊಳಲಮ್ಮ ದೇವಿ ದೇವಸ್ಥಾನ ಮೂಲಭೂತ ಸೌಲಭ್ಯ ಅಭಿವೃದ್ಧಿ ಕಾಮಗಾರಿಗೆ ರೂ.6 ಕೋಟಿ 47

▶▶3ನೇ ಪುಟಕ್ಕೆ

## ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಧ್ವಜರೋಹಣ



**■ವಿಜಯಸಾಕ್ಷಿ ಸುದ್ದಿ, ಗದಗ**

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಕಾರ್ಯಾಲಯದಲ್ಲಿ 77ನೇ ಗಣರಾಜ್ಯೋತ್ಸವದ ಅಂಗವಾಗಿ ಧ್ವಜರೋಹಣವನ್ನು ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ನೆರವೇರಿಸಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವ್ಹಿ. ಸಂಕನೂರ, ಮಾಜಿ ಜಿಲ್ಲಾಧ್ಯಕ್ಷ ಎಂ.ಎಸ್. ಕರಿಗೌಡ್ರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಜಿಲ್ಲಾ ಉಪಾಧ್ಯಕ್ಷೆ ಜಯಶ್ರೀ ಉಗಲಾಟದ, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷೆ ನಿರ್ಮಲಾ ಕೊಳ್ಳಿ, ಮಾಜಿ ಅಧ್ಯಕ್ಷೆ ಅಶ್ವಿನಿ ಜಗತಾಪ್, ಪ್ರಮುಖರಾದ ಜಗನ್ನಾಥಸಾ ಭಾಂಡಗೆ, ಸಿದ್ದು ಪಲ್ಲೇದ, ಮಂಜುನಾಥ ಶಾಂತಗೇರಿ, ಗದಗ ನಗರ ಮಂಡಲ ಉಪಾಧ್ಯಕ್ಷೆ ಚನ್ನಮ್ಮ ಹುಳಕಣ್ಣವರ, ಪದ್ಮಿನಿ ಮುತ್ತಲದಿನ್ನಿ, ಗದಗ ನಗರ ಮಂಡಲ ಮಹಿಳಾ ಮೋರ್ಚಾ ಅಧ್ಯಕ್ಷೆ ವಿಜಯಲಕ್ಷ್ಮೀ ಮಾನ್ವಿ, ಪ್ರಧಾನ ಕಾರ್ಯದರ್ಶಿ ಸ್ವಾತಿ ಅಕ್ಕಿ, ಪುಷ್ಪಾ ಪೂಜಾರ, ರೇಖಾ ಗೌಳಿ, ಅಪ್ಪಣ್ಣ ಟೆಂಗಿನಕಾಯಿ, ಕೆ.ಪಿ. ಕೋಟಿಗೌಡ್ರ, ಮೇಘನಾ ಕೊಟ್ಟೂರ, ದೇವೇಂದ್ರಪ್ಪ ಹೂಗಾರ, ವಿನೋದ ಹಂಸನೂರ ಮುಂತಾದವರು ಉಪಸ್ಥಿತರಿದ್ದರು.

### ಲಕ್ಕುಂಡಿಯಲ್ಲಿ ಸರಕಾರಿ ಆಂಗ್ಲ ಮಾಧ್ಯಮ ಎಲ್.ಕೆ.ಜಿ ಶಾಲೆಗೆ ಚಾಲನೆ

# ಶೀಘ್ರವೇ ಅತಿಥಿ ಶಿಕ್ಷಕರ ನೇಮಕ

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಕಳೆದ ಎರಡು ವರ್ಷಗಳಿಂದ ಗ್ರಾಮದಲ್ಲಿ ಆರಂಭವಾಗಿರುವ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಕಲಿಯುತ್ತಿರುವ ಮಕ್ಕಳು ಇಂಗ್ಲಿಷ್ ಪಠ್ಯವನ್ನು ನಿರ್ಗಳವಾಗಿ ಓದುತ್ತಿರುವುದು ಸಂತಸ ತಂದಿದ್ದು, ಬಡ ಮಕ್ಕಳಿಗೆ ಅನುಕೂಲವಾಗುವ ದಿಸೆಯಲ್ಲಿ ಸರಕಾರ ಪೂರ್ವ ಪ್ರಾಥಮಿಕ ಆಂಗ್ಲ ಮಾಧ್ಯಮ ಶಾಲೆ ತೆರೆಯಲು ಅನುಮತಿ ನೀಡಿದ್ದು ಸ್ವಾಗತಾರ್ಹ ಎಂದು ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಹೇಳಿದರು.

ಇಲ್ಲಿಯ ಸರಕಾರಿ ಮಾದರಿ ದ್ವಿಭಾಷಾ ಪ್ರಾಥಮಿಕ ಶಾಲೆಯಲ್ಲಿ ಪೂರ್ವ ಪ್ರಾಥಮಿಕ ಶಾಲೆಗೆ ಚಾಲನೆ ನೀಡಿ ಮಾತನಾಡಿದರು.

ಇಂದಿನ ವೈಜ್ಞಾನಿಕ ಯುಗದಲ್ಲಿ ಮಕ್ಕಳಿಗೆ ಆಂಗ್ಲ ಭಾಷೆ ಅವಶ್ಯವಾಗಿದ್ದು, ಬಡ ಮಕ್ಕಳಿಗೆ ಖಾಸಗಿ ಶಾಲೆಯಲ್ಲಿ ಹೆಚ್ಚಿನ ಹಣ ಕೊಟ್ಟು ಕಲಿಯುವುದು ಅಸಾಧ್ಯವಾಗಿತ್ತು. ಈ ದಿಸೆಯಲ್ಲಿ ಸರಕಾರ ಆಂಗ್ಲ ಮಾಧ್ಯಮವನ್ನು ತೆರೆದು ಅನುಕೂಲ ಕಲ್ಪಿಸಿದ್ದು, ಪಾಲಕರು ತಮ್ಮ ಮಕ್ಕಳ ಬಗ್ಗೆ ಕಾಳಜಿ ವಹಿಸಿ ಶಿಕ್ಷಣವನ್ನು ಕೊಡಿಸಬೇಕು. ಈಗಾಗಲೇ ಗ್ರಾಮ ಪಂಚಾಯಿತಿಯಿಂದ ಶೈಕ್ಷಣಿಕ ಅಭಿವೃದ್ಧಿಗಾಗಿ ಹಲವಾರು ಮೂಲಭೂತ ಸೌಲಭ್ಯ ಮತ್ತು ಸಾಮಗ್ರಿಗಳನ್ನು ನೀಡಿದೆ. ಶಿಕ್ಷಕರು ಪಠ್ಯದ ಜೊತೆಗೆ ಸಂಸ್ಕಾರಯುತ ನೀತಿ ಪಾಠಗಳನ್ನು ಸಹ ಕಲಿಸಿದರೆ ಮಕ್ಕಳ ಭವಿಷ್ಯ ಉಜ್ವಲವಾಗುತ್ತದೆ ಎಂದರು.



ಎಸ್.ಡಿ.ಎಂ.ಸಿ ಮತ್ತು ಪಾಲಕರನ್ನು ಒಳಗೊಂಡ ಸಮಿತಿಯನ್ನು ರಚಿಸಿ ಈಗ ತಾತ್ಕಾಲಿಕ ಅಥಿತಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುವುದು. ಪ್ರಧಾನ ಮಂತ್ರಿ ಆಡಳಿತ ನಿಯೋಜನೆಯ ಅನುಮೋದನೆ ದೊರಕಿದ ನಂತರ ಶಿಕ್ಷಣ ಇಲಾಖೆಯು ಅಥಿತಿ ಶಿಕ್ಷಕರಿಗೆ 10 ಸಾವಿರ ಮತ್ತು ಆಯಾಗಳಿಗೆ 6 ಸಾವಿರ ರೂ ವೇತನ ನೀಡಲಾಗುವುದು. ಅಲ್ಲಿಯವರೆಗೂ ಅವರು ಉಚಿತವಾಗಿ ಸೇವೆ ಸಲ್ಲಿಸಬೇಕು ಎಂದು ವಿವರಿಸಿದ ಸಿಆರ್‌ಪಿ ಕೆ.ಟಿ. ಮೀರಾನಾಯಕ, ಸರಕಾರಿ ಶಾಲೆಗಳಿಗೆ ದಾಖಲಾತಿ ಹೆಚ್ಚಿಸುವ ಉದ್ದೇಶದಿಂದ ಪೂರ್ವ ಪ್ರಾಥಮಿಕ ಶಾಲೆಯನ್ನು ಆರಂಭಿಸಲಾಗುತ್ತಿದೆ ಎಂದರು.

ಸಿಆರ್‌ಪಿ ಕೆ.ಟಿ. ಮೀರಾನಾಯಕ ಮಾತನಾಡಿ, ದ್ವಿಭಾಷಾ ಮಾಧ್ಯಮ ಪೂರ್ವ ಪ್ರಾಥಮಿಕ ಶಾಲೆಗೆ ಅಧಿಕೃತವಾಗಿ ಇಂದು ಚಾಲನೆ ದೊರಕಿದ್ದು, ಈಗಾಗಲೇ 25 ಮಕ್ಕಳು ಪ್ರವೇಶ ಪಡೆದಿದ್ದಾರೆ. ಮಕ್ಕಳ ಪ್ರವೇಶಕ್ಕೆ ಸಂಖ್ಯೆಯನ್ನು ನಿಗದಿ ಮಾಡಿಲ್ಲ. ಪಾಲಕರು ಇಂಗ್ಲಿಷ್ ಮತ್ತು ಕನ್ನಡ ಮಾಧ್ಯಮಕ್ಕೆ ಪ್ರವೇಶ ಪಡೆಯಬಹುದು.

40 ಮಕ್ಕಳಿಗೆ ಒಬ್ಬ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲಾಗುವುದು ಎಂದರು.

ಎಸ್.ಡಿ.ಎಂ.ಸಿ ಅಧ್ಯಕ್ಷ ಗವಿಶಿದ್ದಪ್ಪ ಯಲಿಶಿರುಂಜ, ಉಪಾಧ್ಯಕ್ಷೆ ಪವಿತ್ರಾ ಬಣವಿ, ಮಾಜಿ ಅಧ್ಯಕ್ಷೆ ನಾಗಮ್ಮ ಹಾಲಿನವರ, ಪ್ರಭಾರಿ ಮುಖ್ಯೋಪಾಧ್ಯಾಯ ಜೆ.ಪಿ. ಶೇಟ್, ಎಸ್.ಡಿ.ಎಂ.ಸಿ ಸದಸ್ಯರು, ಶಿಕ್ಷಕ ವೃಂದದವರು ಇದ್ದರು.

### ಚಿಕೇನಕೊಪ್ಪದ ಚನ್ನವೀರ ಶರಣರ 31ನೇ ಪುಣ್ಯಸ್ಮರಣೋತ್ಸವ, ಶರಣಶ್ರೀ ಪ್ರಶಸ್ತಿ ಪ್ರದಾನ

# ದುಡಿದು ತಿನ್ನುವ ರೂಢಿಯನ್ನು ಬೆಳೆಸಿಕೊಳ್ಳಿ



**■ವಿಜಯಸಾಕ್ಷಿ ಸುದ್ದಿ, ಗದಗ**

ರೈತರು ಮತ್ತು ಅವಿದ್ಯಾವಂತರಿಗಿಂತ ವಿದ್ಯಾವಂತರಲ್ಲಿಯೇ ಕೌಟುಂಬಿಕ ಕಲಹಗಳು, ವಿವಾಹ ವಿಚ್ಛೇದನಗಳು ಹೆಚ್ಚುತ್ತಿವೆ. ಬೆಲೆಬಾಳುವ ನಾಯಿಯನ್ನು ಸಾಕುವ ಜನ, ತಂದೆ-ತಾಯಿಯನ್ನು ಸಾಕದಿರುವುದು ನೋವಿನ ಸಂಗತಿ ಎಂದು ಅಕ್ಕಿಮಠದ ಗುರುಲಿಂಗ ಸ್ವಾಮೀಜಿ ಹೇಳಿದರು.

ಭಾನುವಾರ ತಾಲೂಕಿನ ಬಳಗಾನೂರ ಗ್ರಾಮದ ಚಿಕೇನಕೊಪ್ಪದ ಚನ್ನವೀರ ಶರಣರ 31ನೇ ಪುಣ್ಯಸ್ಮರಣೋತ್ಸವ, ಜಾತ್ರಾ ಮಹೋತ್ಸವದ ಅಂಗವಾಗಿ ಸಾಮೂಹಿಕ ವಿವಾಹ, ಶರಣಶ್ರೀ ಪ್ರಶಸ್ತಿ ಪ್ರದಾನ, ಭಕ್ತಿ ರಸಮಂಜರಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಉತ್ತಮ ಸಂಸ್ಕಾರ, ಸಂಸ್ಕೃತಿ ಬೆಳೆಸಿಕೊಂಡು ಗುರು-ಹಿರಿಯರನ್ನು ಗೌರವ, ಶ್ರದ್ಧೆಯಿಂದ ಕಾಣುವದು ಇಂದಿನ ಅಗತ್ಯವಾಗಿದೆ. ಇಂದು ಅತಿಯಾದ ಮೊಬೈಲ್ ಬಳಕೆಯು ನಮಗೆ ಹೆಚ್ಚು ತೊಂದರೆದಾಯಕವಾಗಿದ್ದು, ದುಡಿದು ತಿನ್ನುವ ರೂಢಿಯನ್ನು ಬೆಳೆಸಿಕೊಳ್ಳಬೇಕು ಎಂದರು.

ಶಿವಶಾಂತವೀರ ಶರಣರು ಮಾತನಾಡಿ, ಶ್ರೀಮಠದ ಜಾತ್ರೆ ಮನುಷ್ಯನ ಬದುಕನ್ನು ಖಾತ್ರಿಪಡಿಸುವ ಜಾತ್ರೆಯಾಗಿದೆ. ಇಲ್ಲಿ ಭಕ್ತ ಹಿತಚಿಂತನೆ ಮೂಲಕ ಜನರಲ್ಲಿ ಸದ್ಭಾವನೆ, ಸದ್ವಿಚಾರ ಬೆಳೆಸುವದಾಗಿದೆ. ಸಮಾಜ ಮುಖಿಯಾಗಿ ಕಾರ್ಯಚಟುವಟಿಕೆ ಆಯೋಜಿಸುವದು ಅವುಗಳ ಸದುಪಯೋಗ ಪಡೆದುಕೊಂಡು ಜೀವನವನ್ನು ಸಾರ್ಥಕ ಮಾಡಿಕೊಳ್ಳುವುದಾಗಿದೆ ಎಂದರು.

ಶರಣಶ್ರೀ ಪ್ರಶಸ್ತಿ ಪುರಸ್ಕೃತೆ ಕವಿತಾ ಮಿಶ್ರಾ ಮಾತನಾಡಿ, ರೈತ ಬೆಳೆಗಳನ್ನು ಬೆಳೆಯಲು ಕೇವಲ ಬೆವರು ಸುರಿಸುವದಷ್ಟೇ ಅಲ್ಲ, ರಕ್ತವನ್ನೂ ಸುರಿಸುತ್ತಾನೆ ಎಂಬುದನ್ನು ಮನಗಾಣಬೇಕಾಗಿದೆ. ಬಿಸಿಲು-ಚಳಿ-ಮಳೆ ಎನ್ನದೇ ನಿರಂತರವಾಗಿ ದುಡಿದು ಬೆಳೆದ ಬೆಳೆಗೆ ಬೆಲೆ ನಿಗದಿ ಮಾಡುವ ಅವಕಾಶ ಸಮಾಜ, ಸರಕಾರ ನೀಡಿಲ್ಲ. ರೈತರು ಋತುಮಾನಾಧಾರಿತ ಬೆಳೆ ಪದ್ಧತಿಯನ್ನು ರೂಢಿಸಿಕೊಂಡು ಸಮಾಜದಲ್ಲಿ ಯಾರಿಗೂ ಕಡಿಮೆ ಇರದ ರೀತಿಯಲ್ಲಿ ಜೀವನ ಮಟ್ಟವನ್ನು ರೂಪಿಸಿಕೊಳ್ಳಬೇಕು ಎಂದರು.

ಶರಣರ ಮಠ ಹಾಗೂ ನವಲಗುಂದದ ಸಿದ್ಧಲಿಂಗನಗೌಡ ಜಂಗ್ಲೆಪ್ಪಗೌಡ್ರ ಮೆಮೋರಿಯಲ್ ಉಮಾ ವಿದ್ಯಾಶ್ರೀ ಟ್ರಸ್ಟ್ ಸಹಯೋಗದಲ್ಲಿ ಕೃಷಿ ಸಾಧಕಿ ರಾಯಚೂರಿನ ಕವಿತಾ ಮಿಶ್ರಾ, ಜಾನಪದ ಕಲಾವಿದ ಕಡುಬಗೆರೆ ಮುನಿರಾಜ, ಐಐಟಿ ಸಂಶೋಧನಾರ್ಥಿ ಅನ್ನಪೂರ್ಣ ಬಸಯ್ಯ ಬಳೂಲಮಠರಿಗೆ ಅವರಿಗೆ ಜಾತ್ರಾ ಮಹೋತ್ಸವ ಕಾರ್ಯಕ್ರಮದಲ್ಲಿ ಶರಣಶ್ರೀ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ನೂತನವಾಗಿ ಶ್ರೀಮಠದಲ್ಲಿ ಹರಕೆಯ ತೇರನ್ನು ಲೋಕಾರ್ಪಣೆಗೊಳಿಸಲಾಯಿತು. 36 ಜೋಡಿ ದಾಂಪತ್ಯ ಜೀವನಕ್ಕೆ ಪಾದಾರ್ಪಣೆ ಮಾಡಿದರು. ಬಳೂಟಗಿಯ ಹಿರೇಮಠದ ಶಿವಕುಮಾರ ಸ್ವಾಮೀಜಿ, ರಬಕವಿಯ ಗುರುಸಿದ್ಧ ಸ್ವಾಮೀಜಿ, ಕಂಪಸಾಗರ ಅಭಿನವ ನಾಗಭೂಷಣ ಸ್ವಾಮೀಜಿ, ಹೆಬ್ಬಾಳದ ಪ್ರಕಾಶ ಶರಣರು, ಮಾಜಿ ಕೇಂದ್ರ ಸಚಿವ ಬಸವರಾಜ ಪಾಟೀಲ ಅನ್ವರಿ ಇದ್ದರು.

ಬೆಂಗಳೂರಿನ ಗಾಯಕ ಕಡುಬಗೆರೆಯ ಮುನಿರಾಜು ಹಾಗೂ ತಂಡದವರಿಂದ ಭಕ್ತಿ ರಸಮಂಜರಿ ಕಾರ್ಯಕ್ರಮ ಜರುಗಿತು. ಹನುಮಂತ ಅಲ್ಕೋಡ ಹಾಗೂ ತಂಡದಿಂದ ಭಕ್ತಿ ಸಂಗೀತ ಜರುಗಿತು. ಬಿ.ವೈ. ಡೊಳ್ಳಿನ ಶರಣಶ್ರೀ ಪ್ರಶಸ್ತಿ ವಾಚನ ಮಾಡಿದರು. ಸವಿತಾ ಶಿವಕುಮಾರ ಸ್ವಾಗತಿಸಿ, ನಿರೂಪಿಸಿದರು. ಶಿವಲಿಂಗ ಶಾಸ್ತ್ರಿಗಳು ಸಿದ್ದಾಪುರ ನಿರೂಪಿಸಿದರು.

## ಭಾರತದ ಸಂವಿಧಾನವನ್ನು ಗೌರವಿಸಿ



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಬಾರತದ ಸಂವಿಧಾನವನ್ನು ಗೌರವದಿಂದ ಕಾಣಬೇಕು ಎಂದು ನಿವೃತ್ತ ಸಮಾಜ ಕಲ್ಯಾಣಾಧಿಕಾರಿ ಶಿವಾನಂದ ಹರ್ತಿ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡುಮಕ್ಕಳ ಶಾಲೆ ನಂ. 1ರಲ್ಲಿ 77ನೇ ಗಣರಾಜ್ಯೋತ್ಸವ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ನಮ್ಮ ಸಂವಿಧಾನ ಜಾರಿಗೆ ಬಂದಿದ್ದು 1950 ಜನವರಿ 26ರಂದು. ಈ ದಿನದಿಂದ ನಮ್ಮ ಭಾರತವು ಅಧಿಕೃತವಾಗಿ ಸರ್ವಭೌಮ, ಸಮಾಜವಾದಿ, ಪ್ರಜಾಸತ್ತಾತ್ಮಕ ಗಣರಾಜ್ಯವಾಯಿತು. ಈ ಸಂದರ್ಭದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಸಂವಿಧಾನ ರಚಿಸುವ ಮೂಲಕ ನಾವು ಸಮಾನರಾಗಿ ಬದುಕಲು ದಾರಿ ತೋರಿಸಿದರು. ಇಂತಹ ಮಹನೀಯರನ್ನು ನಾವೆಲ್ಲರೂ ನಿತ್ಯ ನೆನೆಯಬೇಕು. ಈ ಶಾಲೆ ಸಾಕಷ್ಟು ಅಭಿವೃದ್ಧಿ ಹೊಂದಿದೆ. ಉತ್ತಮ ಶಿಕ್ಷಕರ ಬಳಗ ಹೊಂದಿದ್ದು, ಕಲಿಕೆಯಲ್ಲಿ ಕ್ರಿಯಾಶೀಲರಾಗಬೇಕು ಎಂದರು.

ಅಶೋಕ ಸೋನಗೋಜಿ ಮಾತನಾಡಿ, ಸರಕಾರಿ ಮಾದರಿ ಶಾಲೆ ಯಾವಾಗಲೂ ಮಾದರಿಯಾಗಿದ್ದು, ಈ ಶಾಲೆಯ ಅಭಿವೃದ್ಧಿಗೆ ನಮ್ಮ ಸಹಾಯ-ಸಹಕಾರ ಇರುತ್ತದೆ ಎಂದರು.

ಪ.ಪಂ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ಆಯ್.ಎಂ. ಶೇಖ ಮಾತನಾಡಿ, ಸರಕಾರಿ ಶಾಲೆಯಲ್ಲಿನ ಮಕ್ಕಳ ಶೈಕ್ಷಣಿಕ ಅಭಿವೃದ್ಧಿಗೆ, ಮಕ್ಕಳಿಗಾಗಿ ದತ್ತಿನಿಧಿ ಇಡುತ್ತೇನೆ ಎಂದರು.

ಧ್ವಜಾರೋಹಣವನ್ನು ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡ್ರ ನೆರವೇರಿಸಿದರು. ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಅಧ್ಯಕ್ಷತೆಯನ್ನು ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ ವಹಿಸಿದ್ದರು. ಅಶೋಕ ಸೋನಗೋಜಿ, ಐ.ಎಂ. ಶೇಖ, ಇಸ್ಮಾಯಿಲ ಖಾಜಿ, ಬಸವರಾಜ ನಿಂಗೋಜಿ, ಬಿ.ಎಲ್. ಜಾಧವ, ಗುಡುಸಾಬ ಗಾಡಿ, ಪಿರದೋಷಬಾನು ಸಿದ್ದಿ, ಕೆ.ಎಂ. ಹೆರಕಲ್ಲ, ಎಂ.ಎಂ. ಮೇಗಲಮನಿ, ಎಂ.ಎಂ. ಕೊಪ್ಪಳ, ಎಚ್.ಆರ್. ಭಜಂತ್ರಿ, ಎಸ್.ಎಚ್. ಉಪ್ಪಾರ, ಟಿ.ವೀಣಾ, ಎಸ್.ಡಿ. ಪಂಡಿತ, ಎಸ್.ವಿ. ಹಿರೇಮಠ, ವೀಣಾ ಕಂಠಿ, ಶೈಲಾ ದೊಡ್ಡಮನಿ, ತ್ರಿವೇಣಿ ಬಡ್ನಿ, ರತ್ನಾ ಬಬಲಿ, ಶಭಾನಾ ಡಾಲಾಯತ, ಕವಿತಾ ಬಿನ್ನಾಳ ಇದ್ದರು.

## ಶಿಕ್ಷಣಕ್ಕೆ ನೀಡುವ ಕೊಡುಗೆ ಶ್ರೇಷ್ಠವಾದದ್ದು



**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಶಿಕ್ಷಣಕ್ಕೆ ನೀಡುವ ಕೊಡುಗೆಗಳು ಶ್ರೇಷ್ಠವಾದವು ಎಂದು ಎಸ್‌ಡಿಎಂಸಿ ಅಧ್ಯಕ್ಷ ಮುಸ್ತಾಕಹ್ಮದ ಅಕ್ಕಿ ಹೇಳಿದರು.

ಅವರು ಪಟ್ಟಣದ ಅಂಜುಮನ್ ಸರಕಾರಿ ಉರ್ದು ಪ್ರಾಥಮಿಕ ಶಾಲೆಯಲ್ಲಿ 77ನೇ ಗಣರಾಜ್ಯೋತ್ಸವದ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ಸರಕಾರಿ ಶಾಲೆಗಳ ಮಕ್ಕಳ ಶೈಕ್ಷಣಿಕವಾಗಿ ಅಭಿವೃದ್ಧಿ ಹೊಂದಲು ಮಕ್ಕಳ ಕಲಿಕೆಗಾಗಿ 25 ಸಾವಿರ ರೂ ದತ್ತಿ ನಿಧಿಯನ್ನು ಐ.ಎಂ. ಶೇಖ ಅವರು ನೀಡಿರುವುದರಿಂದ ಬಡ ಮಕ್ಕಳಿಗೆ ಸಹಾಯವಾಗಿದೆ ಎಂದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಪ.ಪಂ ಸ್ಥಾಯಿ ಸಮಿತಿ ಮಾಜಿ ಅಧ್ಯಕ್ಷ ಐ.ಎಂ. ಶೇಖ, ನಮಗೆ ಕಲಿಯುವ ಸಂದರ್ಭದಲ್ಲಿ ಸಾಕಷ್ಟು ಬಡತನವಿತ್ತು. ಈಗ ದೇವರ ಕೃಪೆಯಿಂದ ಎಲ್ಲವೂ ದೊರೆತಿದೆ. ಬಡ ಮಕ್ಕಳು ಶೈಕ್ಷಣಿಕವಾಗಿ ಹಿಂದುಳಿಯಬಾರದು. ಸರಕಾರಿ ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣ ದೊರೆಯುತ್ತಿದೆ. ಮಕ್ಕಳು ಈ ದೇಶದ ಆಸ್ತಿಯಾಗಿದ್ದಾರೆ ಎಂದರು.

ಅಧ್ಯಕ್ಷತೆಯನ್ನು ಮುಸ್ತಾಕಹ್ಮದ ಅಕ್ಕಿ ವಹಿಸಿದ್ದರು. ಗುರುಮಾತೆ ಎಲ್.ಎಂ. ಹಾವೇರಿ, ಆರ್.ಕೆ. ನಾಯಕ್, ಅಮಿದಾಬೇಗಂ, ಇಸ್ಮಾಯಿಲ ಖಾಜಿ, ಹೈದರ ಖವಾಸ, ದಾವುದ ಜಮಾಲ, ಮುನ್ನಾ ಡಾಲಾಯತ, ಹಸನಸಾಬ ಶೇಖ, ರಿಶೀದಹ್ಮದ ಲಾಡಸಾಬನವರ, ಜಾಫರ್ ಲಾಡಸಾಬನವರ, ರಫೀಕ್ ದಲೀಲ, ದಾವಲಸಾಬ ರಾಮಗೇರಿ, ಜಾಂಗೀರ ಭದ್ರಾಪೂರ, ಮಾಬುಲಿ ದುರ್ಗಿಗುಡಿ, ಹಸನಸಾಬ ಕಲೇಗಾರ, ದಾವಲಸಾಬ ಲಕ್ಷ್ಮೇಶ್ವರ, ಖಾದರಸಾಬ ದುರ್ಗಿಗುಡಿ ಇದ್ದರು.

### ರಾಷ್ಟ್ರೀಯ ಮತದಾರರ ದಿನಾಚರಣೆ ಪ್ರಯುಕ್ತ ಬೈಕ್ ರ್‍ಯಾಲಿ, ಪ್ರತಿಜ್ಞಾವಿಧಿ ಬೋಧನೆ

# ಮತದಾರರು ಯಾವುದೇ ಆಮಿಷಗಳಿಗೆ ಬಲಿಯಾಗದಿರಿ

**■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಭಾರತ ಜಗತ್ತಿನ ಅತಿ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾನದ ಪಾತ್ರ ಅತ್ಯಂತ ಮಹತ್ತರವಾದುದು ಎಂದು ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಬಿ.ಕಂದಕೂರು ಹೇಳಿದರು.

ಪಟ್ಟಣದ ಎಸ್.ಎಮ್. ಭೂಮರಡ್ಡಿ ಕಾಲೇಜಿನಲ್ಲಿ ತಾಲೂಕು ಸ್ವೀಪ್ ಸಮಿತಿ ಗಜೇಂದ್ರಗಡ, ತಾಲೂಕು ಆಡಳಿತ, ಪೊಲೀಸ್ ಇಲಾಖೆ, ಶಿಕ್ಷಣ ಇಲಾಖೆ, ಎಸ್.ಎಮ್. ಭೂಮರಡ್ಡಿ ಪದವಿಪೂರ್ವ ಕಾಲೇಜುಗಳ ಸಹಯೋಗದಲ್ಲಿ ರವಿವಾರ ನಡೆದ ರಾಷ್ಟ್ರೀಯ ಮತದಾರರ ದಿನಾಚರಣೆ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

1950ರಲ್ಲಿ ಭಾರತದ ಚುನಾವಣಾ ಆಯೋಗದ ಸಂಸ್ಥಾಪನಾ ದಿನವನ್ನು ಗುರುತಿಸಲು ಪ್ರತಿ ವರ್ಷ ಜನವರಿ 25ರಂದು ರಾಷ್ಟ್ರೀಯ ಮತದಾರರ ದಿನವನ್ನಾಗಿ ಆಚರಣೆ ಮಾಡಲಾಗುತ್ತದೆ. ಮತದಾನ ಜನರ ಪ್ರಮುಖ ಹಕ್ಕು. ಪ್ರಜೆಗಳಿಂದ ಆಯ್ಕೆಯಾದ ಸರ್ಕಾರ ಜನರ ಆಶೋತ್ತರಗಳಂತೆಯೇ ನಡೆಯಬೇಕೆಂಬುದು ಸಂವಿಧಾನದ ನಿಯಮ. ತಮ್ಮ ಒಳಿತು ಬಯಸುವ ಜನ ನಾಯಕನನ್ನು ಆಯ್ಕೆ ಮಾಡಲು ಮತದಾನ ಪ್ರಕ್ರಿಯೆ ನಡೆಯುತ್ತದೆ. ಮತದಾನದ ಪ್ರಾಮುಖ್ಯತೆ ಮತ್ತು ಪ್ರಜೆಗಳ ಮೇಲಿರುವ ಜವಾಬ್ದಾರಿಯ ಕುರಿತು ಜಾಗೃತಿ ಮೂಡಿಸುವುದಕ್ಕಾಗಿಯೇ ಪ್ರತಿ ವರ್ಷ ಜನವರಿ 25ರಂದು ರಾಷ್ಟ್ರೀಯ ಮತದಾರರ ದಿನವನ್ನು ಆಚರಿಸಲಾಗುತ್ತದೆ ಎಂದರು.




ಮತದಾರರು ಯಾವುದೇ ಆಮಿಷಗಳಿಗೆ ಬಲಿಯಾಗಬಾರದು. ಆಮಿಷಕ್ಕೆ ಬಲಿಯಾದರೆ ತಮ್ಮ ಮತದಾನ ಹಕ್ಕನ್ನು ಕಳೆದುಕೊಂಡಂತೆ. ಆದರಿಂದ ಯುವ ಮತದಾರರು ತಮ್ಮ ಪಾಲಕರಿಗೆ ತಿಳಿಹೇಳುವ ಕೆಲಸವನ್ನು ಮಾಡಬೇಕಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮಕ್ಕೂ ಮುನ್ನ ತಹಸೀಲ್ದಾರ್ ಕಚೇರಿಯಿಂದ ಬೈಕ್ ರ್‍ಯಾಲಿ ಪ್ರಾರಂಭವಾಗಿ ಕೇಂದ್ರ ಬಸ್ ನಿಲ್ದಾಣ, ತರಕಾರಿ ಮಾರುಕಟ್ಟೆ, ಸಿಬಿಎಸ್ಸಿ ಶಾಲೆ, ಕೆ.ಕೆ ಸರ್ಕಲ್, ದುರ್ಗಾ ಸರ್ಕಲ್, ಗರಡಿ ಮನೆ, ರಂಗಮಂದಿರ, ಕೊಳ್ಳಿಯವರ ಕತ್ರಿ, ಬಜರಂಗದಳ ಸರ್ಕಲ್, ಚೌಕಿಮಠ ಮೂಲಕ ಎಸ್.ಎಮ್. ಭೂಮರಡ್ಡಿ ಕಾಲೇಜು ಮೈದಾನಕ್ಕೆ ಮುಕ್ತಾಯಗೊಳಿಸಲಾಯಿತು.

ತಹಸೀಲ್ದಾರ್ ಕಿರಣಕುಮಾರ ಕುಲಕರ್ಣಿ ಮಾತನಾಡಿ, 18 ವರ್ಷ ತುಂಬಿದ ಯುವ ಮತದಾರರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ಜನವರಿ 25ರಂದು ಮತದಾರರ ದಿನವನ್ನಾಗಿ ಆಚರಣೆ ಮಾಡಲಾಗುತ್ತಿದೆ ಎಂದರು.

ಇದೇ ಸಂದರ್ಭದಲ್ಲಿ ರಾಷ್ಟ್ರೀಯ ಮತದಾರರ ದಿನಾಚರಣೆ ಕುರಿತು ಪ್ರತಿಜ್ಞಾವಿಧಿ ಬೋಧಿಸಲಾಯಿತು. ಪ್ರೌಢಶಾಲೆ ಹಂತ, ಪದವಿಪೂರ್ವ ಹಂತ, ಪದವಿ ಹಂತದ ತಾಲೂಕು ಮಟ್ಟದ ರಾಷ್ಟ್ರೀಯ ಮತದಾರರ ದಿನಾಚರಣೆ ಕುರಿತು ಆಯೋಜಿಸಿದ್ದ ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಎಸ್.ಎಂ.ಬಿ ಪಿಯು ಕಾಲೇಜು ಪ್ರಾಚಾರ್ಯ ಜಿ.ಬಿ. ಗುಡಿಮನಿ, ಬಿ.ಕೆ. ಹೊಸಳ್ಳಿ, ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು, ಕಾರ್ಯದರ್ಶಿಗಳು, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ತಾ.ಪಂ, ಗ್ರಾ.ಪಂ ಹಾಗೂ ನರೇಗಾ ಸಿಬ್ಬಂದಿಗಳು ಪಾಲ್ಗೊಂಡಿದ್ದರು. ಉಪನ್ಯಾಸಕ ವಿ.ಎಂ. ಜೂಜನಿ ಕಾರ್ಯಕ್ರಮ ನಿರೂಪಿಸಿದರು.



ಗದಗ ಶಹರದ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯಲ್ಲಿ ಸೋಮವಾರ 77ನೇ ಗಣರಾಜ್ಯೋತ್ಸವದ ಧ್ವಜಾರೋಹಣವನ್ನು ಸಂಸ್ಥೆಯ ಅಧ್ಯಕ್ಷ ರವೀಂದ್ರ ಮೂಲಿಮನಿ ನೆರವೇರಿಸಿದರು. ಆಡಳಿತ ಮಂಡಳಿಯ ಆರ್.ಎಸ್. ಪಾಟೀಲ, ಉಪನ್ಯಾಸಕರಾದ ಸಂತೋಷ ಬಿಂಗಿ, ವಿಶ್ವನಾಥ ಹಿರೇಮಠ, ಎಂ.ವಿ. ಹಿರೇಮಠ, ನಜ್ಮಾ ನದಾಫ್, ಪ್ರತಿಭಾ ಗಾಜಿ, ಸಹಾನ ಶೇಖ, ಕವಿತಾ ಯತ್ನಳ್ಳಿ, ಹನಮಂತಪ್ಪ ಮತಗಟ್ಟಿ ಸೇರಿದಂತೆ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.



ಗದಗ ಶಹರದ ಆ್ಯಂಗ್ಲೋ ಉರ್ದು ಬಾಲಕ-ಬಾಲಕಿಯರ ಪ್ರೌಢಶಾಲೆಯಲ್ಲಿ ಸೋಮವಾರ 77ನೇ ಗಣರಾಜ್ಯೋತ್ಸವದ ಧ್ವಜಾರೋಹಣವನ್ನು ಸಂಸ್ಥೆಯ ಅಧ್ಯಕ್ಷ ಸರ್ಫರಾಜ್ ಅಹ್ಮದ ಎಸ್. ಉಮಚಗಿ ನೆರವೇರಿಸಿದರು. ಸಮಾರಂಭದಲ್ಲಿ ಉಪಾಧ್ಯಕ್ಷ ಎ.ಎಂ. ಸೌದಾಗರ, ಕಾರ್ಯದರ್ಶಿ ಎಂ.ಎಂ. ಶೇಖ, ಸದಸ್ಯರಾದ ಆರ್.ಎಲ್. ಬಾಗಲಕೋಟ, ಶಹನವಾಜ ಎಸ್.ಉಮಚಗಿ, ಶಾಮಾಜ ಎಸ್. ಉಮಚಗಿ, ಎ.ಎಂ. ಮುಲ್ಲಾ, ಕೆ.ಎಂ. ಶೇಖ, ಜೆ.ಬಿ. ಉಮಚಗಿ, ಎಂ.ಎ. ಹಣಗಿ, ಎಸ್.ಎ. ಬಿಜಾಪೂರ, ಮುಖ್ಯೋಪಾಧ್ಯಾಯರಾದ ಎಂ.ಎ. ರಿಕಾರ್ಟಿ, ಎಲ್.ಆರ್. ಇಟಗಿ ಮುಂತಾದವರಿದ್ದರು.

### ಹಿರೇಮಠ ಸಭಾಭವನದಲ್ಲಿ ನಡೆದ ಹಿಂದೂ ಸಮ್ಮೇಳನದಲ್ಲಿ ದಿಲೀಪ್ ವರ್ಣೇಕರ್


# ಮಮ್ಮಿ-ಡ್ಯಾಡಿ ಸಂಸ್ಕೃತಿಯನ್ನು ಹೊಡೆದೋಡಿಸಿ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಭಾರತದ ಪ್ರತಿ ಮನೆಮನೆಯಲ್ಲಿಯೂ ಸ್ವದೇಶಿ ಮಂತ್ರ ರಿಂಗಣಿಸುತ್ತಿರಬೇಕು. ಇದರಿಂದ ಭಾರತದ ಉದ್ಧಾರವಾಗಲು ಸಾಧ್ಯ. ಇಲ್ಲವಾದರೆ ಎಲ್ಲವನ್ನೂ ಪರದೇಶಕ್ಕೆ ಕೊಟ್ಟು ಒಂದಿನ ನಾವು ಪಾಪರ್‌ಗಳಾಗಬೇಕಾಗುತ್ತದೆ ಎಂದು ಧರ್ಮ ಜಾಗರಣ ಪ್ರಾಂತ ಕಾರ್ಯಕಾರಿಣಿ ಸದಸ್ಯ ದಿಲೀಪ್ ವರ್ಣೇಕರ್ ಹೇಳಿದರು.

ಪಟ್ಟಣದ ಹಿರೇಮಠ ಸಭಾಭವನದಲ್ಲಿ ನಡೆದ ಹಿಂದೂ ಸಮ್ಮೇಳನದಲ್ಲಿ ಮುಖ್ಯ ವಕ್ತಾರರಾಗಿ ಪಾಲ್ಗೊಂಡು ಅವರು ಮಾತನಾಡಿದರು.

ದೇಶದಲ್ಲಿ ಹಿಂದೂಗಳ ಸಂಖ್ಯೆ ಕ್ಷೀಣಿಸಲು ಹಿಂದೂಗಳೇ ಕಾರಣ. ನಮಗೆ ಒಬ್ಬರು-ಇಬ್ಬರು ಮಕ್ಕಳು ಸಾಕೆಂದು ನಿರ್ಧರಿಸುತ್ತ ಹೋದರೆ ಒಂದು ದಿನ ನಾವೇ ಈ ದೇಶದಲ್ಲಿ ಅಲ್ಪಸಂಖ್ಯಾತ ರಾಗಬೇಕಾಗುತ್ತದೆ. ಈ ಎಚ್ಚರಿಕೆ ಎಲ್ಲರಲ್ಲಿಯೂ ಇರಲಿ. ಆದ್ದರಿಂದ ಹಿಂದೂಗಳು ಕನಿಷ್ಠ ಮೂರು-ನಾಲ್ಕು ಮಕ್ಕಳನ್ನಾದರೂ ಪಡೆಯಬೇಕು. ಇದರಿಂದ ನಮ್ಮ ಹಿಂದೂಸ್ತಾನವನ್ನು ನಮ್ಮದನ್ನಾಗಿ ಉಳಿಸಿಕೊಳ್ಳಲು ಸಾಧ್ಯ ಎಂದರು.




ದೂರದರ್ಶನದಲ್ಲಿ ಬರುವ ಜಾಹೀರಾತುಗಳನ್ನು ನೋಡಿ ನಾವೇನಾದರೂ ವಿದೇಶಿ ವಸ್ತುಗಳ ಖರೀದಿಗೆ ಮುಗಿಬಿದ್ದರೆ ನಮ್ಮ ದೇಶದ ಆರ್ಥಿಕ ಪರಿಸ್ಥಿತಿ ಅಧೋಗತಿಗಿಳಿಯುತ್ತದೆ. ಆದ್ದರಿಂದ ನಾವೆಲ್ಲರೂ ಸ್ವದೇಶಿ ವಸ್ತುಗಳನ್ನು ಬಳಸುವತ್ತ ಹೆಚ್ಚಿನ ಗಮನ ನೀಡಬೇಕು. ನಮ್ಮ ದೇಶವನ್ನು ಶ್ರೀಮಂತಿಕೆಯ ರಾಷ್ಟ್ರ ಮಾಡಬೇಕು. ಮಹಿಳೆಯರು ಕ್ರಿಯಾಶೀಲರಾದರೆ ಹಿಂದೂ ಸಮಾಜವನ್ನು ಕಟ್ಟಲು ಯಾವುದೇ ತೊಂದರೆಯಿಲ್ಲ. ಜಗತ್ತಿನ 40 ದೇಶಗಳಲ್ಲಿ ಸಂಘದ ಶಾಖೆಗಳಿವೆ. ಹಿಂದೂಗಳನ್ನು ಒಟ್ಟುಗೂಡಿಸಲು ಹೋರಾಡಿ ಯಶಸ್ವಿಯಾದವರು ಡಾ. ಹೆಡಗೆವಾರರು ಎಂದು ಹೇಳಿದರು.

ಬೇರೆ ಧರ್ಮದವರು ಯಾರೇ ಭಾರತವನ್ನು ಆಳಿದರೂ ಅವರಿಗೆ ಭಾರತವನ್ನು ತಮ್ಮ ಧರ್ಮದ ದೇಶವನ್ನಾಗಿಸಲು ಸಾಧ್ಯವಾಗಿಲ್ಲ. ಯಾಕೆಂದರೆ ಹಿಂದುತ್ವ ಈ ದೇಶದಲ್ಲಿ ಅಷ್ಟೊಂದು ಗಟ್ಟಿಯಾಗಿದೆ. ಮಮ್ಮಿ-ಡ್ಯಾಡಿ ಸಂಸ್ಕೃತಿಯನ್ನು ಹೊಡೆದೋಡಿಸಿ ಅಪ್ಪ-ಅಮ್ಮ ಸಂಸ್ಕೃತಿಯನ್ನು ಜಾರಿಗೆ ತಂದರೆ ದೇಶದ ಸಂಸ್ಕೃತಿ ಇನ್ನಷ್ಟು ಹೆಚ್ಚುತ್ತದೆ ಎಂದರು.

ಸಾನ್ನಿಧ್ಯ ವಹಿಸಿದ್ದ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ ಆಶೀರ್ವಚನ ನೀಡಿ, ಸಂಘದ ನೂರು ವರ್ಷಗಳ ಕಾರ್ಯಕ್ರಮ ಶ್ಲಾಘನೀಯ. ಮುಖ್ಯ ವಕ್ತಾರರ ವಿಚಾರಗಳನ್ನು ನಾವು ಅಳವಡಿಸಿಕೊಳ್ಳಲು ಪ್ರಯತ್ನಿಸೋಣ. ಹಿಂಸೆಯಿಂದ ದೂರವಿದ್ದು ಅಹಿಂಸೆಯಿಂದ ಜೀವನ ನಡೆಸುವವನೇ ನಿಜವಾದ ಹಿಂದೂ. ಯಾರೇ ಈ ದೇಶವನ್ನು ನಾಶ ಮಾಡಲು, ಮತಾಂತರ ಮಾಡಲು ಯತ್ನಿಸಿದರೆ ಅದು ಸಾಧ್ಯವಾಗುವುದಿಲ್ಲ. ಏಕೆಂದರೆ ಭಾರತೀಯರು ಭೋಗ ಜೀವಿಗಳಲ್ಲ, ಅವರು ತ್ಯಾಗ ಜೀವಿಗಳು ಮತ್ತು ಯೋಗ ಜೀವಿಗಳು. ಮನುಸ್ಮೃತಿ ಆಗಿನ ಕಾಲಕ್ಕೆ ಸೂಕ್ತವಾಗಿತ್ತು. ಅದರಲ್ಲಿನ ಅನೇಕ ಉತ್ತಮೋತ್ತಮ ಅಂಶಗಳು ಇಂದಿಗೂ ಪ್ರಸ್ತುತವಾಗಿವೆ. ಸುಮ್ಮನೆ ಅದನ್ನು ಟೀಕಿಸುವುದು ಬೇಡ ಎಂದರು.

ಕಾರ್ಯಕ್ರಮದಲ್ಲಿ ರವಿ ದಂಡಿ, ಉಮೇಶ ಪಾಟೀಲ, ಆರ್.ಜಿ. ಪಾಟೀಲ, ಉಮೇಶ ಸಂಗನಾಳಮಠ, ಮುತ್ತಣ್ಣ ಪಲ್ಲೇದ, ರಾಜಶೇಖರ ವಂಕಲಕುಂಟಿ, ಹೇಮಗಿರೀಶ ಹಾವನಾಳ, ಸುತ್ತಲಿನ ಗ್ರಾಮಗಳ ಪ್ರಮುಖರನೇಕರು ಪಾಲ್ಗೊಂಡಿದ್ದರು. ಗೀತಾ ಭೋಪಳಾಪೂರ ಪ್ರಾರ್ಥಿಸಿದರು. ಜಗದೀಶ ಸಂಕನಗೌಡ್ರ ಸ್ವಾಗತಿಸಿದರು. ಅರ್ಚನಾ ಕೊಂಡಿ ಸಮಿತಿಯ ಸದಸ್ಯರನ್ನು ಪರಿಚಯಿಸಿದರು. ಸಮಿತಿ ಅಧ್ಯಕ್ಷ ಬಸವರಾಜ ವಂಕಲಕುಂಟಿ ಪ್ರಾಸ್ತಾವಿಕ ನುಡಿಗಳನ್ನಾಡಿದರು. ರಘುನಾಥ ಕೊಂಡಿ ನಿರೂಪಿಸಿದರು. ಡಾ. ಆರ್.ಕೆ. ಗಚ್ಚಿನಮಠ ವಂದಿಸಿದರು.

ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರೂ ಸಹ ಸಂಘದ ಧೋರಣೆಗಳನ್ನು ಬಹುವಾಗಿ ಮೆಚ್ಚಿಕೊಂಡಿದ್ದರು. ಸಂಘವು ಜಾತಿ-ಜಾತಿಗಳಲ್ಲಿನ ವ್ಯತ್ಯಾಸವನ್ನು ಹೊಡೆದೋಡಿಸಲು ಪ್ರಯತ್ನಿಸುತ್ತಿದೆ. ಹಿಂದೂ ಧರ್ಮಕ್ಕೆ ಜಾಗತಿಕ ಮಟ್ಟದಲ್ಲಿ ಹೆಚ್ಚಿನ ಮಹತ್ವವಿದೆ. ಸ್ವಾಮಿ ವಿವೇಕಾನಂದರು ವಿಶ್ವಧರ್ಮಸಮ್ಮೇಳನದಲ್ಲಿ ಮಾತನಾಡಿ ಹಿಂದೂ ಧರ್ಮದ ಪ್ರತಿಪಾದನೆ ಮಾಡಿದ್ದು ಇದಕ್ಕೆ ಕಾರಣ. ಇನ್ನಾದರೂ ನಾವು ಒಗ್ಗಟ್ಟಾಗದಿದ್ದರೆ ಬಿಕ್ಕಟ್ಟನ್ನು ಸೃಷ್ಟಿಸಿ ಹಿಂದೂ ರಾಷ್ಟ್ರವನ್ನು ಛಿದ್ರಛಿದ್ರ ಮಾಡಲು ದುಷ್ಟ ಶಕ್ತಿಗಳು ಕಾಯುತ್ತಿವೆ. ಅದಕ್ಕಾಗಿ ಹಿಂದೂಗಳೆಲ್ಲರೂ ಎಚ್ಚರವಾಗಿರಬೇಕೆಂದು ದಿಲೀಪ್ ಹೇಳಿದರು.

# ನರೇಗಲ್ಲ; ವಿವಿಧೆಡೆ ಸಂಭ್ರಮದ ಗಣರಾಜ್ಯೋತ್ಸವ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಭಾರತ ವಿವಿಧ ಧರ್ಮ, ಭಾಷೆ, ಸಂಸ್ಕೃತಿ, ಆಚಾರ, ವಿಚಾರಗಳಿಂದ ಬೇರೆ ಬೇರೆಯಾಗಿದ್ದರೂ ಸಹ ರಾಷ್ಟ್ರೀಯತೆ ಬಂದಾಗ ಏಕತೆ ಕಂಡುಬರುತ್ತದೆ ಎಂದು ನರೇಗಲ್ಲ ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ಹೇಳಿದರು.

ನರೇಗಲ್ಲ ಶ್ರೀ ಜಗದ್ಗುರು ಪಂಚಾಚಾರ್ಯ ಗ್ರಾಮೀಣಾಭಿವೃದ್ಧಿ ಶಿಕ್ಷಣ ಸಂಸ್ಥೆಯ ಶ್ರೀ ರೇಣುಕಾಚಾರ್ಯ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನಡೆದ 77ನೇ ಗಣರಾಜೋತ್ಸವದ ಧ್ವಜಾರೋಹಣ ನೆರವೇರಿಸಿ ಅವರು ಮಾತನಾಡಿದರು.

ಸಂಸ್ಥೆಯ ಕಾರ್ಯದರ್ಶಿ ಈಶ್ವರ ಬೆಟಗೇರಿ, ಮುಖ್ಯ ಶಿಕ್ಷಕಿ ಎನ್.ಎಸ್. ಹಿರೇಮಠ, ಶಿಕ್ಷಕ ಈಶ್ವರ ಆದಿ, ಎ.ಎಮ್. ಬೆಟಗೇರಿ, ದೈಹಿಕ ಶಿಕ್ಷಕಿ ವಿ.ಬಿ. ಬಿಂಗಿ ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಕೋಟುಮಚಗಿಯಲ್ಲಿ: ಸಮಿಪದ ಕೋಟುಮಚಗಿ ಗ್ರಾಮದ 109ನೇ ಅಂಗನವಾಡಿ ಕೇಂದ್ರದಲ್ಲಿ 77ನೇ ಗಣರಾಜೋತ್ಸವ ಆಚರಿಸಲಾಯಿತು. ಗ್ರಾಮದ ಮುಖಂಡ ಸಂಗಪ್ಪ ಗೋದಿ ಧ್ವಜಾರೋಹಣ ನೆರವೇರಿಸಿದರು. ಶಿವಪ್ಪ ನೇಗಲಿ, ಯಲ್ಲಪ್ಪ ಲಕ್ಕುಂಡಿ, ಶಿವು ನಿಲೂಗಲ್ಲ, ಮಂಜು ನೀರಲಗಿ ಸೋಮು ಗೋದಿ, ಮಕ್ಕಳು ಹಾಗೂ ಶಿಕ್ಷಕಿ ಸೇರಿದಂತೆ ಅಡುಗೆ ಸಹಾಯಕರು ಉಪಸ್ಥಿತರಿದ್ದರು.

ಪಿಎಸ್‌ಎಸ್ ಶಾಲೆಯಲ್ಲಿ: ಪಟ್ಟಣದ ಪಿಎಸ್‌ಎಸ್ ಡಾ. ಕೆ.ಬಿ. ಧನ್ನೂರ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಗಣರಾಜ್ಯೋತ್ಸವವನ್ನು ಆಚರಿಸಲಾಯಿತು. ಸಂಸ್ಥೆಯ ಅಧ್ಯಕ್ಷ ಡಾ. ಕೆ.ಬಿ. ಧನ್ನೂರ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು. ಕಸ್ತೂರಿ ಧನ್ನೂರ ಅಧ್ಯಕ್ಷತೆ ವಹಿಸಿದ್ದರು. ಸಕ್ರೆಪ್ಪ ಹಡಪದ, ಪಾರ್ವತಿಬಾಯಿ, ಮುಖ್ಯ ಶಿಕ್ಷಕ ಮಂಜುನಾಥ ಗ್ರಾಮಪುರೋಹಿತ, ಸುರೇಶ ಮಲ್ಲನಗೌಡ್ರ, ಸಿಬ್ಬಂದಿಯವರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಸರಕಾರಿ ಪ.ಪೂ ಕಾಲೇಜಿನಲ್ಲಿ ನಡೆದ ಸಮಾರಂಭದಲ್ಲಿ ಪ್ರಾಚಾರ್ಯ ಸಂಗಪ್ಪ ಗುಳಗಣ್ಣವರ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು. ಭೂದಾನಿ ಆನಂದ ಕುಲಕರ್ಣಿ, ನಿವೃತ್ತ ಸೈನಿಕ ದಾದಾಸಾಬ ನದಾಫ್, ಕಾಲೇಜಿನ ಸಿಬ್ಬಂದಿಗಳು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಲಕ್ಷ್ಮೇಶ್ವರದಲ್ಲಿ ಗಣರಾಜ್ಯೋತ್ಸವ ಸಂಭ್ರಮ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದಲ್ಲಿ ಗಣರಾಜ್ಯೋತ್ಸವದ ಅಂಗವಾಗಿ ವಿವಿಧ ಶಾಲಾ-ಕಾಲೇಜು, ಸಂಘ-ಸಂಸ್ಥೆಗಳಲ್ಲಿ ಧ್ವಜಾರೋಹಣ ನೆರವೇರಿಸಲಾಯಿತು. ಪಟ್ಟಣದ ಗಾಂಧಿ ಮಂದಿರದಲ್ಲಿ ಬಸವೇಶ ಮಹಾಂತಶೆಟ್ಟರ ಧ್ವಜಾರೋಹಣ ನೆರವೇರಿಸಿದರು. ಅಶೋಕ ಬಟಗುರ್ಕಿ, ಚಂಬಣ್ಣ ಬಾಳಿಕಾಯಿ, ಮಾಲತೇಶ ಅಗಡಿ, ನೀಲಪ್ಪ ಕರ್ಜೆಕಣ್ಣವರ, ಭರತಣ್ಣ ಬರಿಗಾಲಿ, ಆದೇಶ ಬರಿಗಾಲಿ ಮುಂತಾದವರಿದ್ದರು.

ಪಟ್ಟಣದ ಕಿತ್ತೂರು ಚನ್ನಮ್ಮ ವೃತ್ತದಲ್ಲಿ ಪಂಚಮಸಾಲಿ ಸಮಾಜದ ಅಧ್ಯಕ್ಷ ಮಂಜುನಾಥ ಮಾಗಡಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು. ಡಿ.ಬಿ. ಬಳಿಗಾರ ಚಂಬಣ್ಣ ಬಾಳಿಕಾಯಿ, ಮಹೇಶ ಹೊಗೆಸೊಪ್ಪಿನ, ಪೂರ್ಣಾಜಿ ಖರಾಟೆ, ಶಿವಜೋಗೆಪ್ಪ ಚಂದರಗಿ, ನೀಲಪ್ಪ ಕರ್ಜೆಕಣ್ಣವರ, ಬಿ.ಎಸ್. ಜಾಲಗಾರ, ಚಂದ್ರು ಮಾಗಡಿ ಮುಂತಾದವರಿದ್ದರು.

ನಗರದ ಭೂ-ಮಾಪನ ಕಚೇರಿಯಲ್ಲಿ, ಪೊಲೀಸ್ ಠಾಣೆಯಲ್ಲಿ ಪಿಎಸ್‌ಐ ನಾಗರಾಜ ಗಡಾದ, ಸಮುದಾಯ ಆರೋಗ್ಯ ಕೇಂದ್ರದಲ್ಲಿ ಡಾ. ಶ್ರೀಕಾಂತ ಕಾಟೇವಾಲೆ, ಬಿಸಿಎನ್ ವಿದ್ಯಾಸಂಸ್ಥೆಯಲ್ಲಿ ಕಾರ್ಯದರ್ಶಿ ಲೋಹಿತ್ ನೆಲವಿಗಿ, ಅಗಡಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಪ್ರಾಚಾರ್ಯ ಡಾ. ಪರಶುರಾಮ ಬಾರಕಿ, ಉಮಾವಿದ್ಯಾಲಯದಲ್ಲಿ ಮುಖ್ಯೋಪಾಧ್ಯಾಯ ಎಸ್.ಎಚ್. ಪೂಜಾರ, ಎಂ.ಎ. ಕಾಲೇಜ್‌ನಲ್ಲಿ ಪ್ರಾಚಾರ್ಯ ಆರ್.ಟಿ. ಲಮಾಣಿ, ನ್ಯಾಯಾಲಯದಲ್ಲಿ ಹಿರಿಯ ವಿಭಾಗದ ನ್ಯಾಯಾಧೀಶರಾದ ಬಿ.ವೈ. ಕರಗುದರಿ, ತಾ.ಪಂ ಕಚೇರಿಯಲ್ಲಿ ಇಓ ಕೃಷ್ಣಪ್ಪ ಧರ್ಮರ, ಜಿ.ಎಫ್. ಉಪನಾಳ ಶಾಂತಿಧಾಮ ವೃದ್ಧಾಶ್ರಮದಲ್ಲಿ ಅಧ್ಯಕ್ಷ ಪ್ರಕಾಶ ಉಪನಾಳ, ಪಟ್ಟಣದ ಇನ್ನಿತರ ಸರ್ಕಾರಿ ಇಲಾಖೆಗಳಲ್ಲಿ, ತಾಲೂಕಿನ ಎಲ್ಲ ಶಾಲಾ-ಕಾಲೇಜುಗಳಲ್ಲಿ, ತಾಲೂಕಿನ ವಿವಿಧ ಗ್ರಾ.ಪಂಗಳಲ್ಲಿ ಧ್ವಜಾರೋಹಣ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನೆರವೇರಿದವು.

### ಸೌರಶಕ್ತಿಯಿಂದ ವಿದ್ಯುತ್ ಉತ್ಪಾದಿಸಿ ಸುಸ್ಥಿರ ನೀರಾವರಿಗೆ ನಾಂದಿ ಹಾಡಿದ ದೇವರಡ್ಡಿ ಅಗಸನಕೊಪ್ಪ

# 'ಬಿಂಕದಕಟ್ಟಿಯ ಭಗೀರಥ'ನಾದ ಅನ್ನದಾತ

**■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಸೂರ್ಯದೇವನ ಕಿರಣಗಳ ಕರುಣೆಯಿಂದ ಉತ್ಪಾದನೆಗೊಂಡ ವಿದ್ಯುಚ್ಛಕ್ತಿಯಿಂದ ಜಮೀನಿನ ಪೂರ್ವದಿಕ್ಕಿನಲ್ಲಿನ ತಿಳಿನೀರಿನ ಕೊಳದೊಳಗಿನ ಗಂಗಾಮಾತೆಯನ್ನು ಭೂಮಿತಾಯಿಯ ಮಡಿಲಿಗರ್ಪಿಸಿ ಕಬ್ಬು ನಾಟಿ ಮಾಡಿ ಕನಸು ನನಸಾಗಿಸಿಕೊಂಡ ರೈತ ಭಗೀರಥ ದೇವರೆಡ್ಡಿ ಅವರ ನಿರಂತರ ಪರಿಶ್ರಮ ಶ್ಲಾಘನೀಯ ಎಂದು ಕಪ್ಪತಗುಡ್ಡ ನಂದಿವೇರಿ ಮಠದ ಡಾ. ಶಿವಕುಮಾರ ಮಹಾಸ್ವಾಮಿಗಳು ಹೇಳಿದರು.



ಸಮೀಪದ ಬಿಂಕದಕಟ್ಟಿ ಗ್ರಾಮದ ಭಗೀರಥ ದೇವರೆಡ್ಡಿ ಅವರ ಜಮೀನಿನಲ್ಲಿ ತೋಟಗಾರಿಕೆ ಇಲಾಖೆ, ರೋಟರಿ ಕ್ಲಬ್ ಗದಗ-ಬೆಟಗೇರಿ, ಧರಿತ್ರಿ ಸಾವಯವ ಪರಿವಾರ ಗದಗ, ಕಪ್ಪತಮಲ್ಲೇಶ್ವರ ತೋಟಗಾರಿಕೆ ರೈತ ಉತ್ಪಾದಕ ಕಂಪನಿ ಕಡಕೋಳ, ದಾಕ್ಷಾಯಿಣಿ ಜಾಬಶೆಟ್ಟಿ ಫೌಂಡೇಶನ್ ರಾಮದುರ್ಗ ಹಾಗೂ ಗ್ರೀನ್‌ಲ್ಯಾಂಡ್ ಬಯೋಟೆಕ್ ಇವರ ಸಹಯೋಗದಲ್ಲಿ ಆಯೋಜಿಸಲಾಗಿದ್ದ ರೈತರಿಗೆ ಸೋಲಾರ್ ಪಂಪ್‌ಸೆಟ್ ಕುರಿತು ಜಾಗೃತಿ ಹಾಗೂ ಪ್ರಾರಂಭೋತ್ಸವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ವಿಶಾಲವಾದ ಕೆರೆ, ಕೆರೆ ತುಂಬಾ ನೀರು ಇದ್ದರೂ ನೀರಾವರಿಗೆ ನೀರಿಲ್ಲವೆಂಬ ಕೊರತೆ ದೇವರಡ್ಡಿಯವರನ್ನು ಬಾಧಿಸುತ್ತಲೇ ಇತ್ತು. ವಿದ್ಯುಚ್ಛಕ್ತಿ ಸಂಪರ್ಕ ಪಡೆಯಲು ಪಟ್ಟ ಶ್ರಮ ಫಲಿಸದಿದ್ದಾಗ ಸಾವಯವ ಪದ್ಧತಿಯಲ್ಲಿ ಕಬ್ಬು ಬೆಳೆಯುವ ಅವರ ಕನಸು ಕನಸಾಗಿಯೇ ಉಳಿದಿತ್ತು. ಸೋಲಾರ್ ಪಂಪ್‌ಸೆಟ್ ಅಳವಡಿಕೆ ಸೂರ್ಯದೇವನ ವರದಾನದಿಂದ ನನಸಾಯಿತು. ಗಂಗಾಮಾತೆಯನ್ನು ಭೂಮಿತಾಯಿಯ ಮಡಿಲಿಗರ್ಪಿಸಿದ 'ಬಿಂಕದಕಟ್ಟಿಯ ಭಗೀರಥ' ಎಂಬ ಬಿರುದು ನೀಡಿ ದೇವರಡ್ಡಿ ಅಗಸನಕೊಪ್ಪರವರನ್ನು ಗೌರವಿಸಿದರು.

ಹುಲಕೋಟಿಯ ಪ್ರಗತಿಪರ ರೈತ ಗುರುನಾಥಗೌಡ ಓದುಗೌಡರ ಮಾತನಾಡಿ, ಕೃಷಿಯನ್ನು ಲಾಭದಾಯಕ ಉದ್ದಿಮೆಯನ್ನಾಗಿಸುವ ಹಲವು ಉಪಾಯಗಳ ಕುರಿತು ವಿವರಣೆ ನೀಡಿದರು. ಸೋಲಾರ್ ಪಂಪ್‌ಸೆಟ್ ಕುರಿತು ಬಾಲಚಂದ್ರ ಜಾಬಶೆಟ್ಟಿಯವರು ಸಮಗ್ರ ಮಾಹಿತಿಯನ್ನು ನೀಡಿದರು. ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ ಬಿರಾದಾರ ಇಲಾಖೆಯಿಂದ ದೊರೆಯುವ ಸೌಲಭ್ಯಗಳ ಕುರಿತು ವಿವರಿಸಿದರು. ಭಗೀರಥ ದೇವರಡ್ಡಿಯವರು ಈ ಯಶೋಗಾಥೆಯ ಹಿಂದಿರುವ ನೋವು-ನಲಿವುಗಳನ್ನು ಹಂಚಿಕೊಂಡರು.

ಧರಿತ್ರಿ ಸಾವಯವ ಪರಿವಾರ ಮತ್ತು ಕಪ್ಪತಮಲ್ಲೇಶ್ವರ ತೋಟಗಾರಿಕಾ ರೈತ ಉತ್ಪಾದಕ ಕಂಪನಿ ಕಡಕೋಳ, ಗದಗ-ಬೆಟಗೇರಿಯ ರೋಟರಿ ಕ್ಲಬ್ ಪದಾಧಿಕಾರಿಗಳು, ಸಾವಯವ ಕೃಷಿಕರು ಉಪಸ್ಥಿತರಿದ್ದರು. ನಿವೃತ್ತ ಹಿರಿಯ ಸಹಾಯಕ ನಿರ್ದೇಶಕ ಸುರೇಶ ಕುಂಬಾರ ನಿರೂಪಿಸಿದರು. ರುದ್ರಣ್ಣ ಗುಳಗುಳಿ ವಂದಿಸಿದರು.

ಕಾರ್ಯಕ್ರಮದಲ್ಲಿ ದೇವರಡ್ಡಿ ಅಗಸನಕೊಪ್ಪ ದಂಪತಿ ಹಾಗೂ ಸೋಲಾರ್ ಪಂಪ್‌ಸೆಟ್ ಅಳವಡಿಸಲು ತಾಂತ್ರಿಕ ಬೆಂಬಲ ನೀಡಿದ ಗ್ರೀನ್‌ಲ್ಯಾಂಡ್ ಬಯೋಟೆಕ್‌ನ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ ಬಾಲಚಂದ್ರ ಜಾಬಶೆಟ್ಟಿಯವರನ್ನು ಸನ್ಮಾನಿಸಲಾಯಿತು.

# 10.16 ಕೋಟಿ ರೂ ವೆಚ್ಚದಲ್ಲಿ 6 ಸ್ಮಾರಕಗಳ ಸಂರಕ್ಷಣೆ

▸▸ಮೊದಲನೇ ಪುಟದಿಂದ

ಲಕ್ಷ, ಗದಗ ನಗರದ ಶ್ರೀ ವೀರನಾರಾಯಣ, ತ್ರಿಕೂಟೇಶ್ವರ ದೇವಸ್ಥಾನ, ಜುಮ್ಮಾ ಮಸೀದಿ, ಲಕ್ಕುಂಡಿ ಸೇರಿದಂತೆ ಗದಗ ಜಿಲ್ಲೆಯ 22 ಧಾರ್ಮಿಕ ಕೇಂದ್ರಗಳ ಮೂಲಭೂತ ಸೌಲಭ್ಯ ಅಭಿವೃದ್ಧಿ ಕಾಮಗಾರಿಗಳಿಗೆ ರೂ.13 ಕೋಟಿ 5 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ಕಪ್ಪತ್ತಗುಡ್ಡ ಗದಗ ಮೃಗಾಲಯ ವಿಸ್ತರಣೆ, ಮಾಗಡಿ ಕೆರೆ ಅಭಿವೃದ್ಧಿಗಾಗಿ ರೂ. 22 ಕೋಟಿ 50 ಲಕ್ಷಗಳನ್ನು ಪ್ರವಾಸೋದ್ಯಮ ಇಲಾಖೆಯಿಂದ ಬಿಡುಗಡೆ ಮಾಡಲಾಗಿದೆ ಎಂದರು.

ರಾಜ್ಯದಲ್ಲಿ ವಾಣಿಜ್ಯ ವಹಿವಾಟು ನಿರ್ವಹಣೆಯಲ್ಲಿ ಸಾರ್ವಜನಿಕರು ವಿಶೇಷವಾಗಿ ಮಹಿಳೆಯರು ಹೆಚ್ಚಾಗಿ ಬ್ಯಾಂಕ್ ಖಾತೆಗಳನ್ನು ಆರಂಬಿಸುತ್ತಿರುವುದಕ್ಕೆ ಮಹಿಳೆಯರು ಬ್ಯಾಂಕಿನೊಂದಿಗೆ ವ್ಯವಹರಿಸುತ್ತಿರುವುದಕ್ಕೆ ರಾಜ್ಯ ಸರ್ಕಾರದ ಗೃಹಲಕ್ಷ್ಮೀ ಯೋಜನೆಯೇ ಪ್ರಮುಖ ಕಾರಣವಾಗಿದ್ದು, 2022ರಲ್ಲಿ ಬ್ಯಾಂಕ್ ಖಾತೆ ಹೊಂದಿರುವವರ ಸಂಖ್ಯೆ ಶೇ. 9 ಇದ್ದದ್ದು ಪ್ರಸ್ತುತ ಶೇ. 73ರಷ್ಟು ಆಗಿರುವುದು ಸಂತಸದ ಸಂಗತಿಯಾಗಿದೆ ಎಂದರು.

ಜಿಲ್ಲೆಯಲ್ಲಿ ನಮ್ಮ ಸರಕಾರದ ಅತ್ಯಂತ ಮಹತ್ವದ ಯೋಜನೆಯಾದ ಪಂಚ ಗ್ಯಾರಂಟಿ ಯೋಜನೆ ಸಮರ್ಪಕವಾಗಿ ಜಾರಿಗೊಂಡು ರಾಜ್ಯದ ಬಡತನವನ್ನು ಬೇರು ಸಹಿತ ಕಿತ್ತೊಗೆಯುವ ಸಾಧನೆ ನಮ್ಮ ಸರಕಾರದ್ದಾಗಿದೆ. ಕ್ರಾಂತಿಕಾರಕವಾದ ಈ ಯೋಜನೆಗಳು ನಮ್ಮ ಜಿಲ್ಲೆಯಲ್ಲಿ ಸಂಪೂರ್ಣವಾಗಿ ಯಶಸ್ವಿಯಾಗಿರುವದು ಹೆಮ್ಮೆಯ ಸಂಗತಿಯಾಗಿದೆ.

ಗದಗ ಜಿಲ್ಲೆಯಲ್ಲಿ ಒಟ್ಟು 1,41,981 ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರು ಮಂಡಳಿಯಲ್ಲಿ ನೋಂದಣಿಯಾಗಿದ್ದಾರೆ.

2025-26ನೇ ಸಾಲಿನ ಡಿಸೆಂಬರ್ ಅಂತ್ಯದವರೆಗೆ ಗದಗ ಜಿಲ್ಲೆಯ ವಿವಿಧ ಇಲಾಖೆಗಳಲ್ಲಿ ವಿಶೇಷ ಘಟಕ ಯೋಜನೆಯಡಿ ರೂ.85 ಕೋಟಿ ಬಿಡುಗಡೆಯಾಗಿದ್ದು, ರೂ. 73 ಕೋಟಿ ಖರ್ಚು ಮಾಡಲಾಗಿದೆ. ಗಿರಿಜನ ಉಪಯೋಜನೆಯಡಿಯಲ್ಲಿ ರೂ. 12 ಕೋಟಿ ಬಿಡುಗಡೆಯಾಗಿದ್ದು ರೂ. 7 ಕೋಟಿ ಖರ್ಚು ಮಾಡುವುದರ ಮೂಲಕ ಶೇ.62ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ವಿವರಿಸಿದರು.

# ಪರಿಪೂರ್ಣವಾದ ಸಂವಿಧಾನದ ಪಾಲನೆಗೆ ಮುಂದಾಗಿ

▸▸ಮೊದಲನೇ ಪುಟದಿಂದ

ಇದರ ಹೊರತಾಗಿಯೂ ಕರ್ನಾಟಕವು ತನ್ನ ಸ್ವಂತ ಸಂಪನ್ಮೂಲಗಳಿಂದ ರಾಜ್ಯದಲ್ಲಿ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದು ರಾಜ್ಯದ 1.25 ಕೋಟಿ ಕುಟುಂಬಗಳನ್ನು ಬಡತನ ರೇಖೆಯಿಂದ ಮೇಲೆತ್ತಿದೆ. ಕರ್ನಾಟಕದ ತಲಾ ಆದಾಯವು ಜಿಲ್ಲಾವಾರು ಲೆಕ್ಕ ಹಾಕಿದಾಗ ಗಣನೀಯವಾಗಿ ಹೆಚ್ಚಾಗಿರುವುದು ನೆಮ್ಮದಿ ತಂದಿದೆ.

ಗದುಗಿನಂಥಹ ಜಿಲ್ಲೆಯಲ್ಲಿ ಅರ್ಥ ವ್ಯವಸ್ಥೆಯು ಅಭಿವೃದ್ಧಿ ಪಥದಲ್ಲಿ ಮುನ್ನುಗ್ಗುತ್ತಿದ್ದು, ತಲಾ ಆದಾಯವು ಕನಿಷ್ಠ ರೂ.22000 ಪ್ರತಿ ತಿಂಗಳಿಗೆ ತಲುಪಿರುವುದು ಸಂತಸದ ಸಂಗತಿಯಾಗಿದೆ ಎಂದರು.

ಸಂವಿಧಾನದ ಅಡಿಯಲ್ಲಿ ಕಾರ್ಯನಿರ್ವಹಿಸಬೇಕಾದದ್ದು ನಮ್ಮ ಕರ್ತವ್ಯ. ಸಂವಿಧಾನದ ಆಣತಿಗಳನ್ನು ಮತ್ತು ನಿರ್ದೇಶನಗಳನ್ನು ಭಾರತೀಯ ಪ್ರಜಾಸತ್ತಾತ್ಮಕ ವ್ಯವಸ್ಥೆಯನ್ನು ಚಲನಶೀಲಗೊಳಿಸುವ ಸದುದ್ದೇಶದಿಂದ ಪಾಲನೆ ಮಾಡಬೇಕಾದುದು ಪ್ರತಿಯೊಬ್ಬ ನಾಗರಿಕನ ಕರ್ತವ್ಯ. ಸಂವಿಧಾನವನ್ನು ಉಲ್ಲಂಘಿಸುವ ಸಣ್ಣ ಕ್ರಿಯೆಯನ್ನು ಸಹ ಅತ್ಯಂತ ಗಂಭೀರವಾಗಿ ಪರಿಗಣಿಸಬೇಕಾದ ಅವಶ್ಯಕತೆ ಮತ್ತು ಜವಾಬ್ದಾರಿ ಭಾರತೀಯ ನಾಗರೀಕನದ್ದಾಗಿದ್ದು, ಈ ಜವಾಬ್ದಾರಿಯನ್ನು ನಾಗರಿಕರು ಅತ್ಯಂತ ಹೊಣೆಗಾರಿಕೆಯಿಂದ ನಿರ್ವಹಿಸಬೇಕು ಎಂದು ಕರೆ ನೀಡಿದರು.

ಸಮಾರಂಭದಲ್ಲಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ತಾಲೂಕಾಧ್ಯಕ್ಷ ಅಶೋಕ ಮಂದಾಲಿ, ಸಿದ್ದು ಪಾಟೀಲ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ ಕೆ.ಆರ್, ಉಪವಿಭಾಗಾಧಿಕಾರಿ, ಗಂಗಪ್ಪ ಎಂ, ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು, ಗಣ್ಯರುಗಳು, ಸಾರ್ವಜನಿಕರು, ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.



77ನೇ ಗಣರಾಜ್ಯೋತ್ಸವ ಹಾಗೂ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಬಲಿದಾನ ದಿನದ ಅಂಗವಾಗಿ ಹುಲಕೋಟಿ ಗ್ರಾಮದ ಶ್ರೀ ಬೀರೇಶ್ವರ ಟ್ರಸ್ಟ್ ಕಮಿಟಿ ವತಿಯಿಂದ ಸಂಗೊಳ್ಳಿ ರಾಯಣ್ಣನ ಭಾವಚಿತ್ರಕ್ಕೆ ವಿಶೇಷ ಪೂಜೆ ಹಾಗೂ ಧ್ವಜಾರೋಹಣ ಕಾರ್ಯಕ್ರಮ ನೆರವೇರಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಕುರುಬರ ಸಂಘದ ಮಾಜಿ ಅಧ್ಯಕ್ಷ ಕರಿಯಪ್ಪ ಕೊಂಡಿಕೊಪ್ಪ, ಗ್ರಾ.ಪಂ ಸದಸ್ಯರಾದ ಉಮೇಶ ರೊಳ್ಳಿ, ನಿಂಬಣ್ಣ ದುರ್ಗಣ್ಣವರ, ಹಿರಿಯರಾದ ಮೈಲಾರಪ್ಪ ನಿಂಬನಾಯ್ಕರ, ಮರಿಯಪ್ಪ ನಿಂಬನಾಯ್ಕರ, ರವಿ ಕವಡಕಿ, ರೇವಣಸಿದ್ದಪ್ಪ ಪೂಜಾರ, ರಾಮಣ್ಣ ಕವಳಿಕಾಯಿ, ನಾರಾಯಣಗೌಡ ಕರಿರಾಯನಗೌಡ್ರ, ಕರಿಯಪ್ಪ ಸಂಕದಾಳ, ರಾಜು ಗುಡಿಸಲಮನಿ, ಗುರಪ್ಪ ಹುಬ್ಬಳ್ಳಿ, ದೇವಪ್ಪ ಹುಬ್ಬಳ್ಳಿ, ಮೈಲಾರಪ್ಪ ಹೊನ್ನಿನಾಯ್ಕರ, ಸಿದ್ದಪ್ಪ ಕಾವಲಿ, ಮಲ್ಲಪ್ಪ ಪೂಜಾ ಮುಂತಾದವರು ಉಪಸ್ಥಿತರಿದ್ದರು.

### 77ನೇ ಗಣರಾಜ್ಯೋತ್ಸವ ದಿನಾಚರಣೆಯಲ್ಲಿ ಆಕರ್ಷಕ ಪಥಸಂಚಲನ

# ಸಚಿವರಿಂದ ವಿವಿಧ ದಳಗಳ ವೀಕ್ಷಣೆ, ಸಾಧಕರಿಗೆ ಸನ್ಮಾನ



77ನೇ ಗಣರಾಜ್ಯೋತ್ಸವ ಕಾರ್ಯಕ್ರಮದ ನಂತರ ಸಚಿವ ಎಚ್.ಕೆ. ಪಾಟೀಲರು ಅಕ್ಕ ಪಡೆ ಯೋಜನೆಗೆ ಚಾಲನೆ ನೀಡಿದರು. ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯಡಿ ಹೊಲಿಗೆಯಂತ್ರ ಕಿಟ್, ಇಲೆಕ್ಟ್ರಿಷಿಯನ್ ಕಿಟ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಕಲಾವಿದರಿಗೆ, ಸಾಹಿತಿಗಳಿಗೆ ಮಾಸಾಶನ ಮಂಜೂರಾತಿ ಪತ್ರ, ಕಾರ್ಮಿಕ ಇಲಾಖೆ ವತಿಯಿಂದ ಸೇಫ್ಟಿ ಕಿಟ್, ಗೌಂಡಿ ಕಿಟ್, ಪ್ಲಂಬರ್ ಕಿಟ್, ಕಾರ್ಪೆಂಟರ್, ವೆಲ್ಡರ್ ಕಿಟ್, ಕೃಷಿ ಇಲಾಖೆಯ ವತಿಯಿಂದ ಫಲಾನುಭವಿಗಳಿಗೆ ವಿವಿಧ ಯಂತ್ರೋಪಕರಣಗಳನ್ನು ವಿತರಿಸಿದರು.




■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಸೋಮವಾರ ಕಾನೂನು, ಸಂಸದೀಯ, ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ 77ನೇ ಪ್ರಜಾರಾಜ್ಯೋತ್ಸವದ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ವಿವಿಧ ದಳಗಳ ವೀಕ್ಷಣೆ ಮಾಡಿದರು.

ನಂತರ ಜರುಗಿದ ಆಕರ್ಷಕ ಪಥಸಂಚಲನದ ನೇತೃತ್ವವನ್ನು ಜಿಲ್ಲಾ ಸಶಸ್ತ್ರ ಮೀಸಲು ಪಡೆಯ ಶಂಕರಗೌಡ ಚೌದ್ರಿ ವಹಿಸಿದ್ದರು. ಜಿಲ್ಲಾ ಪೊಲೀಸ್ ಬ್ಯಾಂಡ್‌ನ ಮೇರೆ ದೇಶ ಕಿ ಧರತಿ ಹಾಡಿನ ಹಿಮ್ಮೇಳದಲ್ಲಿ ಶಿಸ್ತಿನ ಹೆಜ್ಜೆ ಹಾಕಿದ ಜಿಲ್ಲಾ ಸಶಸ್ತ್ರ ಮೀಸಲು ಪಡೆ, ಜಿಲ್ಲಾ ನಾಗರಿಕ ಪೊಲೀಸ್ ಪಡೆ, ಹೋಮ್‌ಗಾರ್ಡ್, ಅಬಕಾರಿ, ಅರಣ್ಯ ರಕ್ಷಕ ಪಡೆ, ಅಗ್ನಿಶಾಮಕ ದಳ, ಎನ್.ಸಿ.ಸಿ ಬಾಯ್ಸ್ ಹಾಗೂ ಗರ್ಲ್ಸ್, ಮಾಜಿ ಸೈನಿಕರ ಸಂಘ, ಸ್ಕೌಟ್ಸ್, ಗೈಡ್ಸ್, ಜನರಲ್ ಹಾಗೂ ಸೇವಾ ದಳಗಗಳು ಸಚಿವರಿಗೆ ಗೌರವವಂದನೆ ನೀಡಿದವು.

ಸಾರ್ವಜನಿಕ ವಲಯದಲ್ಲಿ ಪ್ರಾಮಾಣಿಕತೆ ಮೆರೆದ ಪ್ರಜ್ವಲ್ ರಿತ್ತಿ, ಕಸ್ತೂರೆವ್ವ ರಿತ್ತಿ, ಗಂಗವ್ವ ರಿತ್ತಿ, ರಜೀಯಾಬೇಗಂ ತಹಸೀಲ್ದಾರ, ಕಿಡ್ನಿ ಕಸಿ ಮಾಡುವುದರಲ್ಲಿ ಮಹತ್ವದ ಪಾತ್ರ ನಿರ್ವಹಿಸಿದ ಡಾ. ಪವನ ಕೋಳಿವಾಡ, ಡಾ. ಭುವನೇಶ ಆರಾಧ್ಯ, ಡಾ. ದೀಪಕ ಕುರಹಟ್ಟಿ, ಮುಖ್ಯಮಂತ್ರಿಯವರ ಪದಕ ಪುರಸ್ಕೃತರಾದ ಶಿದ್ದಾ-ರೆಡ್ಡಿ ಕಪ್ಪತ್ತನವರ, ಅಂಗಾಂಗ ದಾನ ಮಾಡಿದ ನಾರಾಯಣ ವನ್ನಾಲ ಕುಟುಂಬಸ್ಥರಿಗೆ, ಸಮಾಜ ಸೇವಾ ಕ್ಷೇತ್ರದಲ್ಲಿ ಪ್ರಶಸ್ತಿ ಪಡೆದ ಡಾ. ಹೇಮರಡ್ಡಿ ಕಿಲಬನವರ, ಎನ್.ಸಿ.ಸಿ ವಿಭಾಗದಲ್ಲಿ ಪದನ್ನೋತಿ ಹೊಂದಿದ ಮೇಜರ್ ಡಾ. ಬಿ.ಎಸ್. ರಾಠೋಡ, ರಾಜ್ಯ ಮಟ್ಟದ ಕನ್ನಡ ಸೇವಾ ಪ್ರಶಸ್ತಿಗೆ ಭಾಜನರಾದ ರಾಘವೇಂದ್ರ ಗೆಜ್ಜಿ, ಸರ್ಕಾರಿ ಸೇವೆಯಲ್ಲಿ ಉತ್ತಮ ಸೇವೆ ಸಲ್ಲಿಸಿದ ಸುಜಾತಾ ಗೊಬ್ಬರಗುಂಪಿ, ರವಿ ಎಲ್.ಗುಂಜೀಕರ, ಗುರುರಾಜ್ ಚವ್ಹಾಣ್, ಅಕ್ಕಮಹಾದೇವಿ ತಳವಾರ, ಬಿ.ಎಸ್. ಚಕಾರಿ, ದಾವಲಸಾಬ ಗುಬ್ಬಿ, ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರಕ್ಕೆ ಜಮೀನು ನೀಡಿದ ಪ್ರೇಮನಗೌಡ ಪವಾಡಿಗೌಡ್ರ, ಶಿವನಗೌಡ್ರ ಪವಾಡಿಗೌಡ್ರ, ರಾಮನಗೌಡ ಬೋಜಪ್ಪಗೌಡ, ಈಶ್ವರಪ್ಪ ಕುಂಬಾರ, ಪ್ರಕಾಶ ತೋಪಿನ ಇವರನ್ನು ಸನ್ಮಾನಿಸಲಾಯಿತು.

ಪತ್ರಿಕೋದ್ಯಮ/ಮಾಧ್ಯಮ ವಿಭಾಗದಲ್ಲಿ ರಮೇಶ ಭಜಂತ್ರಿ, ಮಾಲಿಂಗಯ್ಯ ಹಿರೇಮಠ, ರಮೇಶ ನಾಡಿಗೇರ, ಎಂ.ಎಂ. ಸ್ವಾಮಿ, ಸಿ.ಎಸ್. ಅರಸನಾಳ, ಪ್ರಾಣೇಶ ಕೊಡಗಾನೂರ, ಮೆಹಬೂಬ ಮೋತೆಖಾನ್, ಶಿದ್ದಲಿಂಗಯ್ಯ ಮಣ್ಣೂರಮಠ, ಲೋಕೇಶ ಮಲ್ಲಿಗವಾಡ, ಚಂದ್ರು ಭಜಂತ್ರಿ, ಸುನೀಲಸಿಂಗ್ ಲದ್ದಿಗೇರಿ ಅವರನ್ನು ಗೌರವಿಸಲಾಯಿತು.

ಎಲ್.ಎಲ್.ಎಂ ಉನ್ನತ ಶಿಕ್ಷಣ ವಿಭಾಗದಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದ ಸಹನಾ ಕಾರ್ಕಳ, ಬಾಲ ಗೌರವ ಪ್ರಶಸ್ತಿ ಪಡೆದ ಸುಪ್ರಿಯಾ ಇಟಗಿ, ರಾಜ್ಯಮಟ್ಟದ ಸಂಸತ್ ಅಣಕು ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆದ ಪ್ರಿಯಾಂಕಾ ಮಾನೆ, ರಾಜ್ಯಮಟ್ಟದ ಏಕಪಾತ್ರಾಭಿನಯದಲ್ಲಿ ಪ್ರಥಮ ಸ್ಥಾನ ಪಡೆದ ನಿಧಿ ತೆ-ಊಟದ, ಏಕಲವ್ಯ ಪ್ರಶಸ್ತಿ ಪಡೆದ ಐಶ್ವರ್ಯ ಕರಿಗಾರ, ಎಸ್.ಎಸ್.ಎಲ್.ಸಿಯಲ್ಲಿ ಹೆಚ್ಚಿನ ಅಂಕ ಪಡೆದ ಮಲ್ಲಪ್ಪ ಬೋಳನವರ, ಲಕ್ಷ್ಮೀ ಹಿರೇಮಠ, ಗಾಯತ್ರಿ ಹಳ್ಳಿ, ವರ್ಷಾ ಗುಂಜ್ಯಾಳ, ಸ್ಫೂರ್ತಿ ಉಡಚಗೊಂಡ, ಲಕ್ಷ್ಮೀ ನಲುಡಿ, ಕ್ರೀಡಾ ಕ್ಷೇತ್ರದಲ್ಲಿ ಮಾಲತಿ ಇನಾಮದಾರ, ವೈಭವ ಸಂಗನಬಶೆಟ್ಟರ್, ಸಿ.ಸಿ. ಮಂಜುನಾಥ ಕುರಿ, ಮಂಜುನಾಥ ಹಳೆರಿತ್ತಿ, ಸಾಕ್ಷಿ ಬಾಗಡೆ, ಅಮೃತಾ ಮೇಟಿ, ಪ್ರಿಯಾಂಕಾ ಲಮಾಣಿ, ಸೃಷ್ಟಿ ಪಾಟೀಲ, ಯಶವಂತಗೌಡ ನಾಡಗೌಡ್ರ, ಸಹನಾ ಹರ್ತಿ, ಆನಂದ ಬೇಂದ್ರೆ, ಮಹಾಂತೇಶ ಬೇಂದ್ರೆ, ಮಹಾಂತೇಶ ಬೇವೂರ, ಮೇಘಾ ಮುನವಳ್ಳಿಮಠ ಇವರುಗಳನ್ನು ಸಚಿವ ಎಚ್.ಕೆ. ಪಾಟೀಲ ಹಾಗೂ ಗಣ್ಯರು ಸನ್ಮಾನಿಸಿದರು.

ಸಮಾರಂಭದಲ್ಲಿ ವಿ.ಪ ಸದಸ್ಯ ಎಸ್.ವಿ. ಸಂಕನೂರ, ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ಸಿದ್ದು ಪಾಟೀಲ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ ಕೆ.ಆರ್, ಉಪವಿಭಾಗಾಧಿಕಾರಿ, ಗಂಗಪ್ಪ ಎಂ, ತಹಸೀಲ್ದಾರ ಶ್ರೀನಿವಾಸಮೂರ್ತಿ ಕುಲಕರ್ಣಿ, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಜನಪ್ರತಿನಿಧಿಗಳು, ಗಣ್ಯರುಗಳು, ಸಾರ್ವಜನಿಕರು, ಶಾಲಾ ವಿಧ್ಯಾರ್ಥಿಗಳು ಉಪಸ್ಥಿತರಿದ್ದರು.

# ಯುವಜನತೆಗೆ ಸಂವಿಧಾನದ ಅರಿವು ಅವಶ್ಯಕ



■ವಿಜಯಸಾಕ್ಷಿ ಸುದ್ದಿ, ಗದಗ

ಸ್ವಾತಂತ್ರ್ಯಾನಂತರದಲ್ಲಿ ರಾಷ್ಟ್ರದ ಸುಸ್ಥಿರತೆಯ ಅಪೇಕ್ಷೆ ಹಾಗೂ ಕನಸನ್ನು ನನಸು ಮಾಡುವತ್ತ ಅನುಸರಿಸಬೇಕಾದ ತತ್ವಗಳನ್ನು ಸಂವಿಧಾನ ಒಳಗೊಂಡಿದೆ. ಆದರೆ, ಸಧ್ಯದ ಯುವ ಜನತೆ ಸಂವಿಧಾನದ ಅರಿವಿನ ಬಗ್ಗೆ ಗಮನ ಹರಿಸದೆ ಇರುವುದು ವಿಷಾದನಿಯ ಎಂದು ಎಮ್.ಸಿ. ಹಿರೇಮಠ ಅಭಿಪ್ರಾಯಪಟ್ಟರು.

ನಗರದ ಸನ್ಮಾರ್ಗ ಪದವಿಪೂರ್ವ ವಿಜ್ಞಾನ ಹಾಗೂ ವಾಣಿಜ್ಯ ವಿದ್ಯಾಲಯದಲ್ಲಿ ಜರುಗಿದ 77ನೇ ಗಣರಾಜ್ಯೋತ್ಸವ ದಿನದ ಧ್ವಜಾರೋಹಣ ನೇರವೇರಿಸಿ ಅವರು ಮಾತನಾಡಿದರು.

ಭಾರತದ ಭವಿಷ್ಯರೂಪಿಗಳಾದ ಯುವಜನಾಂಗ ಸಂವಿಧಾನವನ್ನು ಅರಿತು ರಾಷ್ಟ್ರದ ಸರ್ವತೋಮುಖ ಪ್ರಗತಿಯಲ್ಲಿ ಪಾಲ್ಗೊಳ್ಳಬೇಕಾದುದು ಹಿಂದೆಂದಿಗಿಂತಲೂ ಇಂದು ಅಗತ್ಯ ಮತ್ತು ಅನಿವಾರ್ಯವಾಗಿದೆ ಎಂದರು.

ಸಾಂದರ್ಭಿಕವಾಗಿ ಮಾತನಾಡಿದ ಸಂಸ್ಥೆಯ ನಿರ್ದೇಶಕ ಹಾಗೂ ಗಣಿತ ಶಾಸ್ತ್ರ ಉಪನ್ಯಾಸಕರಾದ ಪ್ರೊ. ಪುನೀತ ದೇಶಪಾಂಡೆ, ಸಾಂವಿಧಾನಿಕ ಹಕ್ಕುಗಳ ಕುರಿತು ನಾವು ಗಮನ ಹರಿಸಿದರೆ ಸಾಲದು, ಅದರ ಜೊತೆ-ಗೆ ಇರುವ 'ಸಾಂವಿಧಾನಿಕ ಕರ್ತವ್ಯ'ಗಳನ್ನು ಅರಿತುಕೊಂಡು ಅವುಗಳ ಅನುಷ್ಠಾನವಾದಾಗ ಭಾರತೀಯರಾದ ನಾವೆಲ್ಲರೂ ನೈಜ ರೀತಿಯಲ್ಲಿ ಸಂವಿಧಾನಕ್ಕೆ ಗೌರವ ಸಲ್ಲಿಸಿದಂತೆ ಎಂದರು.

ವಿದ್ಯಾಲಯದ ಪ್ರಚಾರ್ಯ ಪ್ರೊ. ಪ್ರೇಮಾನಂದ ರೋಣದ ಮಾತನಾಡಿ, ಭಾರತೀಯರಾಗಿ ನಮ್ಮ ಸಾಮಾಜಿಕ ಅಸ್ಮಿತೆಯ ಅಂತಿಮ ಅಡಿಪಾಯವನ್ನು ಸಂವಿಧಾನವು ಒದಗಿಸುತ್ತದೆ. ವಸಾಹತುಶಾಹಿಯ ಮನಃಸ್ಥಿತಿಯನ್ನು ಬದಲಾಯಿಸುವ ಅನೇಕ ಯಶಸ್ವಿ ಪ್ರಯತ್ನಗಳು ಇತ್ತೀಚಿನ ದಶಕಗಳಲ್ಲಿ ನಮ್ಮ ರಾಷ್ಟ್ರದಲ್ಲಿ ಜರುಗುತ್ತಿರುವುದು ಇಡೀ ವಿಶ್ವ ಕಂಡುಕೊಳ್ಳುತ್ತಿರುವ ಸತ್ಯ ಎಂದರು.

ಆಡಳಿತ ಮಂಡಳಿಯ ಸದ್ಯಸರಾದ ಪ್ರೊ. ರೋಹಿತ್, ಪ್ರೊ. ರಾಹುಲ್ ಒಡೆಯರ್, ಪ್ರೊ. ಸೈಯದ್ ಮತೀನ್ ಮುಲ್ಲಾ, ಪ್ರೊ. ಉಡುಪಿ ದೇಶಪಾಂಡೆ ಹಾಗೂ ಬೊಧಕ-ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು ಭಾಗವಹಿಸಿದ್ದರು.

### ಹುಲಕೋಟಿ ಶಿಕ್ಷಣ ಸಂಸ್ಥೆಯಲ್ಲಿ ಗುರುವಂದನಾ, ಸ್ನೇಹ ಸಮ್ಮೇಳನ

# ಹೆತ್ತ ತಂದೆ-ತಾಯಿಗಳನ್ನು ಮರೆಯಬಾರದು



■ವಿಜಯಸಾಕ್ಷಿ ಸುದ್ದಿ, ಗದಗ

ಹೆತ್ತು ಹೊತ್ತು, ಸಾಕಿ-ಸಲುಹಿದ ತಂದೆ-ತಾಯಿಗಳನ್ನು ಎಂದಿಗೂ ಮರೆಯಬಾರದು ಎಂದು ನೀವೃತ್ತ ಉಪನ್ಯಾಸಕ ಎಸ್.ಎಚ್. ಬಡೇಖಾನ ಹೇಳಿದರು.

ಅವರು ಗದಗ ಹುಲಕೋಟಿ ಶಿಕ್ಷಣ ಸಂಸ್ಥೆಯ 1998/2001ನೇ ಸಾಲಿನ ಬಿ.ಕಾಂ ವಿದ್ಯಾರ್ಥಿಗಳ ಗುರುವಂದನಾ ಹಾಗೂ ಸ್ನೇಹ ಸಮ್ಮೇಳನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕಾಲ ಬದಲಾದಂತೆ ಶಿಕ್ಷಣದಲ್ಲಿ ಸಾಕಷ್ಟು ಬದಲಾವಣೆ ಕಂಡಿದ್ದು, ಆಧುನಿಕ ತಂತ್ರಜ್ಞಾನ ಬೆಳೆದಂತೆಲ್ಲಾ ತಂದೆ-ತಾಯಿಗಳನ್ನು, ಗುರುಗಳನ್ನು ಮರೆಯುವ ಈ ಸಮಯದಲ್ಲಿ 25 ವರ್ಷಗಳ ನಂತರ ಕಲಿಸಿದ ಗುರುಗಳನ್ನು ಸೇರಿಸಿ ಗೌರವ ನೀಡುತ್ತಿರುವುದು ಹೆಮ್ಮೆಯ ಸಂಗತಿ. ತಾವೆಲ್ಲರೂ ಸ್ವಂತ ಕಾಲ ಮೇಲೆ ಜವಾಬ್ದಾರಿಥಿಣಣ ಮನುಷ್ಯರಾಗಿ ಬದುಕುತ್ತಿರುವುದು ಶ್ಲಾಘನೀಯವಾಗಿದ್ದು, ನಾವು ಎಷ್ಟೇ ಎತ್ತರಕ್ಕೆ ಬೆಳೆದರೂ ತಂದೆ-ತಾಯಿಗಳನ್ನು ಗೌರವದಿಂದ ಕಾಣಬೇಕು ಎಂದರು.

ಉಪನ್ಯಾಸಕ ಉಮೇಶ ಬಾರಕೇರ ಮಾತನಾಡಿ, ಸಾಕಷ್ಟು ಆಸ್ತಿ-ಅಂತಸ್ತು ಗಳಿಸಬಹುದು. ಆದರೆ, ಒಮ್ಮೆ ಕಳೆದ ಸಮಯ ಮತ್ತೆ ಬಾರದು. ಕಣ್ಣಿಗೆ ಕಾಣುವ ನಿಜ ದೈವ ಅಂದರೆ ತಂದೆ-ತಾಯಿ, ಗುರುಗಳು. ಅವರನ್ನು ಗೌರವದಿಂದ ಕಂಡಾಗ ಮಾತ್ರ ಜನ್ಮ ಸಾರ್ಥಕತೆ ಹೊಂದಲು ಸಾಧ್ಯವಾಗುತ್ತದೆ ಎಂದರು.

ಉಪನ್ಯಾಸಕ ಶಂಕರ ಶ್ಯಾಗೋಟಿ ಮಾತನಾಡಿ, ನಮ್ಮ ವಿದ್ಯಾರ್ಥಿ ವಿ.ಡಿ. ಸಿದ್ದನಗೌಡರ ಜಿಲ್ಲಾ ಮಟ್ಟದ ರಾಜ್ಯೋತ್ಸವ ಪ್ರಶಸ್ತಿ ಪಡೆದಿರುವುದು ನಮಗೆ ಸಂತಸ ನೀಡಿದ್ದು, ಸಮಾಜದಲ್ಲಿ ಒಳ್ಳೆಯ ನಾಗರಿಕರಾಗಿ ಬದುಕಿದಾಗ ಅರ್ಥ ಬರುತ್ತದೆ ಎಂದರು.

ಉಪನ್ಯಾಸಕ ಶರಣಪ್ಪ ಉಳಗೇರಿ ಮಾತನಾಡಿ, ಅಂದು ಸಾಕಷ್ಟು ಬಡತನದಲ್ಲಿ ಎಲ್ಲಾ ವಿದ್ಯಾರ್ಥಿಗಳು ಕಲಿತು ಇಂದು ಸಮಾಜದಲ್ಲಿ ಉತ್ತಮ ಪ್ರಜೆಗಳಾಗಿ ಜೀವನ ನಡೆಸುತ್ತಿರುವುದು ಸಂತಸದ ಸಂಗತಿ ಎಂದರು.

ಉಪನ್ಯಾಸಕ ಪ್ರಕಾಶ ಕರಿಗಾರ ಮಾತನಾಡಿ, ನಾವು ಮೇಲು-ಕೀಳು ಎಂಬ ಕೀಳರಿಮೆ, ಅವನು ಶ್ರೀಮಂತ ನಾನು ಬಡವ ಎಂಬ ಕೀಳರಿಮೆ ತೊರೆದು ನಮ್ಮ ಬದುಕು ಬಂದಂತೆ ಬದುಕಬೇಕು. ಅಂದಾಗ ಬದುಕು ಉಜ್ವಲವಾಗಲು ಸಾಧ್ಯವಾಗುತ್ತದೆ ಎಂದರು.

ಉಪನ್ಯಾಸಕರಾದ ಎಸ್.ಎಚ್. ಬಡೇಖಾನ, ಉಮೇಶ ಬಾರಕೇರ, ಪ್ರಕಾಶ ಕರಿಗಾರ, ಶರಣಪ್ಪ ಉಳಗೇರ, ಶಂಕರ ಶ್ಯಾಗೋಟಿ, ವಿದ್ಯಾರ್ಥಿಗಳಾದ ಶಿವಕುಮಾರ ಮಾದಿನೂರ, ಶ್ರೀಕಾಂತ ಗುಡಿ, ಹೇಮಂತ ಹಂಚಿನಾಳ, ಮುತ್ತಪ್ಪ ಲಕ್ಕುಂಡಿ, ನಾಗರಾಜ ನಂದರಗಿ, ನಾಗರಾಜ ನಾರಾಯಣಪೂರ, ವಿ.ಡಿ. ಸಿದ್ದನಗೌಡರ, ಶರಣು ಚನ್ನಶೆಟ್ಟಿ, ಬಸವರಾಜ ಜಂಗಣ್ಣವರ, ಹನುಮರೆಡ್ಡಿ ಬಂಡಿ ಇದ್ದರು.

# ಕರ್ತವ್ಯಗಳನ್ನು ಪಾಲಿಸಲು ಆದ್ಯತೆ ನೀಡಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇಶದಲ್ಲಿ 1950ರಲ್ಲಿ ಪ್ರಜೆಗಳಿಂದ, ಪ್ರಜೆಗಳಿಗಾಗಿ, ಪ್ರಜೆಗಳಿಗೋಸ್ಕರ ಇರುವ ಆಡಳಿತ ವ್ಯವಸ್ಥೆಯನ್ನು ಜಾರಿಗೆ ತರಲಾಯಿತು. ನಮ್ಮ ದೇಶದ ಆಡಳಿತ ವ್ಯವಸ್ಥೆ ಎಲ್ಲ ದೇಶಗಳಿಗಿಂತಲೂ ಶ್ರೇಷ್ಠವಾಗಿದ್ದು, ಉತ್ತಮ ಆಡಳಿತ ವ್ಯವಸ್ಥೆ ನಮ್ಮ ದೇಶದ್ದಾಗಿದೆ ಎಂದು ಲಕ್ಷ್ಮೇಶ್ವರ ತಹಸೀಲ್ದಾರ ಧನಂಜಯ ಎಂ. ಅಭಿಪ್ರಾಯಪಟ್ಟರು.

ಅವರು ಪಟ್ಟಣದ ಉಮಾವಿದ್ಯಾಲಯ ಹೈಸ್ಕೂಲ್ ಮೈದಾನದಲ್ಲಿ ತಾಲೂಕಾಡಳಿತದ ವತಿಯಿಂದ ಸೋಮವಾರ ಗಣರಾಜ್ಯೋತ್ಸವ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ಪ್ರಜೆಗಳಾದ ನಾವು ಮೊದಲು ನಮ್ಮ ಹಕ್ಕುಗಳ ಜೊತೆಗೆ ಕರ್ತವ್ಯಗಳನ್ನು ಸಹ ಪಾಲಿಸಲು ಆದ್ಯತೆ ನೀಡಬೇಕು. ಭಾರತವು ಶಾಂತತೆ ಮತ್ತು ಸೌಹಾರ್ದತೆಗೆ ಹೆಸರಾರ ದೇಶವಾಗಿದೆ. ಏಕತೆ, ಅಖಂಡಂತೆಯಿಂದ ಬಾಳುವಂತೆ ಎಲ್ಲರೂ ಇರುವದು ಅವಶ್ಯವಾಗಿದೆ. ತಾಲೂಕಾಡಳಿತದಿಂದ ದೊರೆಯಬೇಕಾದ ಎಲ್ಲ ಯೋಜನೆಗಳನ್ನು ಜನರು ಸದುಪಯೋಗ ಪಡಿಸಿಕೊಳ್ಳಬೇಕೆಂದು ಕರೆ ನೀಡಿದರು.

ಸಭೆಯಲ್ಲಿ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ, ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ, ಗ್ಯಾರಂಟಿ ಸಮಿತಿ ತಾಲೂಕಾಧ್ಯಕ್ಷ ನಾಗರಾಜ ಮಡಿವಾಳರ, ಸದಸ್ಯ ಹಸನಸಾಬ ಜಂಗ್ಲಿ, ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ, ಪಿಎಸ್‌ಐ ನಾಗರಾಜ ಗಡದ, ಎಸ್.ಕೆ. ಜಲರಡ್ಡಿ, ಸಿ.ಎ. ಹೂಗಾರ, ಉಪತಹಸೀಲ್ದಾರ ಪ್ರಶಾಂತ ಕಿಮಾಯಿ, ಕಂದಾಯ ನಿರೀಕ್ಷಕ ಎಂ.ಎ. ನದಾಫ್, ಶಿರಸ್ತೇದಾರ ಜೆ.ಎ. ಮನಿಯಾರ, ಪ್ರಶಾಂತ ಸನದಿ ಮುಂತಾದವರಿದ್ದರು.

ಬಿಆರ್‌ಪಿ ಈಶ್ವರ ಮೆಡ್ಲೇರಿ, ಸಿಆರ್‌ಪಿಗಳಾದ ಉಮೇಶ ನೇಕಾರ, ಎನ್.ಎ. ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ ಸ್ವಾಗತಿಸಿದರು. ಮುಲ್ಲಾ ನಿರೂಪಿಸಿದರು. ವಿವಿಧ ಶಾಲಾ-ಕಾಲೇಜುಗಳ ಉಪನ್ಯಾಸಕರು, ಶಿಕ್ಷಕರು, ಸಿಬ್ಬಂದಿಗಳು ಹಾಜರಿದ್ದರು. ನಂತರ ವಿವಿಧ ಶಾಲೆಗಳ ವಿದ್ಯಾರ್ಥಿಗಳಿಂದ ವೇಷಭೂಷಣ, ದೇಶಭಕ್ತಿಗೀತೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಯಶಸ್ವಿಯಾಗಿ ಜರುಗಿದವು.

# ಪ್ರಜಾಪ್ರಭುತ್ವವನ್ನು ಕಾಪಾಡುವುದು ನಮ್ಮೆಲ್ಲರ ಕರ್ತವ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ




ಪಟ್ಟಣದ ಪುರಸಭೆಯ ಆವರಣದಲ್ಲಿ 77ನೇ ಗಣರಾಜ್ಯೋತ್ಸವದ ಧ್ವಜಾ ರೋಹಣವನ್ನು ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ ನೆರವೇರಿಸಿದರು.

ನಂತರ ಮಾತನಾಡಿದ ಅವರು, ಭಾರತದ ಪರಸ್ಪರ ಸಮಾನತೆ, ಸಹಬಾಳ್ವೆ, ಜಾತ್ಯಾತೀತತೆ, ಧರ್ಮ, ಸತ್ಯ, ನ್ಯಾಯ ಮತ್ತು ಸೌಹಾರ್ದತೆಯಿಂದ ನಮ್ಮ ದೇಶದ ಸಂಕೇತವಾಗಿದೆ. ಜಗತ್ತಿನಲ್ಲಿ ಶ್ರೇಷ್ಠ ಸಂವಿಧಾನವನ್ನು ಹೊಂದಿದ ನಮ್ಮ ಭಾರತ ಪ್ರಜಾಪ್ರಭುತ್ವದ ತಳಹದಿಯ ಮೇಲೆ ನಿಂತಿದೆ. ಪ್ರಜಾಪ್ರಭುತ್ವವನ್ನು ಕಾಪಾಡಿಕೊಂಡು ಹೋಗುವದು ನಮ್ಮೆಲ್ಲರ ಕರ್ತವ್ಯವಾಗಿದೆ. ಪಟ್ಟಣ ಗದಗ ಜಿಲ್ಲೆಯಲ್ಲಿಯೇ ತೀವ್ರಗತಿಯಲ್ಲಿ ಅಭಿವೃದ್ಧಿ ಹೊಂದುತ್ತಿದ್ದು, ಅದಕ್ಕೆ ತಕ್ಕಂತೆ ಮೂಲಭೂತ ಸೌಲಭ್ಯ ಕಲ್ಪಿಸಲು ಯೋಜನೆಗಳನ್ನು ರೂಪಿಸಿಕೊಂಡಿದೆ. ಬರುವ ದಿನಗಳಲ್ಲಿ ಪಟ್ಟಣದಲ್ಲಿ ಹೆಚ್ಚು ಹೆಚ್ಚು ಅಭಿವೃದ್ಧಿ ಕಾರ್ಯಗಳು ನಡೆಯಲಿವೆ ಎಂದರು.

ಆಶ್ರಯ ಕಮಿಟಿ ಸದಸ್ಯ ತಿಪ್ಪಣ್ಣ ಸಂಶಿ ಮಾತನಾಡಿ, ಜಗತ್ತಿನಲ್ಲಿಯೇ ಶ್ರೇಷ್ಠ ಸಂವಿಧಾನವನ್ನು ಹೊಂದಿರುವ ನಮ್ಮ ಭಾರತ ದೇಶದಲ್ಲಿ ಸರ್ವರನ್ನು ಸಮಾನತೆಯಿಂದ ಕಾಣಲಾಗುತ್ತಿದೆ. ಡಾ. ಅಂಬೇಡ್ಕರ್ ಅವರು ಅಂದಿನ ದಿನದಲ್ಲಿ ಭಾರತದ ಭವಿಷ್ಯತ್ತನ್ನು ಕಲ್ಪಿಸಿಕೊಂಡು ಈ ಶ್ರೇಷ್ಠ ಸಂವಿಧಾನವನ್ನು ರಚಿಸಿದರು. ಪ್ರಜೆಗಳಿಂದ, ಪ್ರಜೆಗಳಿಗಾಗಿ ಪ್ರಜೆಗಳಿಗೋಸ್ಕರ ಇರುವ ಏಕೈಕ ಸಂವಿಧಾನ ನಮ್ಮ ಭಾರತದ್ದಾಗಿರುವದು ನಮ್ಮ ಹೆಮ್ಮೆಯಾಗಿದೆ ಎಂದು ಹೇಳಿದರು.

ವೇದಿಕೆಯಲ್ಲಿ ವ್ಯವಸ್ಥಾಪಕಿ ಮಂಜುಳಾ ಹೂಗಾರ, ಶೋಭಾ ಬೆಳ್ಳಿಕೊಪ್ಪ, ಮಂಜುನಾಥ ಮುದಗಲ್, ಲಿಂಬಯ್ಯನಮಠ, ಹನುಮಂತ ನಂದೆಣ್ಣವರ, ನೇತ್ರಾ ಹೊಸಮನಿ, ಎಸ್.ಎಸ್. ಪೂಜಾರ, ವೆಂಕಟೇಶ ರಾಮಗೇರಿ, ಪುರಸಭೆ ಅಂಗ ಸಂಸ್ಥೆಗಳಾದ ಉಮಾ ವಿದ್ಯಾಲಯದ ಮುಖ್ಯೋಪಾಧ್ಯಾಯ ಎಸ್.ಎಚ್. ಪೂಜಾರ, ಪುರಸಭೆ ಪ.ಪೂ ಕಾಲೇಜು ಪ್ರಾಚಾರ್ಯ ಅಶೋಕ ಕಳ್ಳಿಮನಿ, ಪುರಸಭೆ ಪದವಿ ಕಲಾ ಮಹಾವಿದ್ಯಾಲಯದ ಪ್ರಾಚಾರ್ಯ ಆರ್.ಟಿ. ಲಮಾಣಿ, ಬಸವಣ್ಣೆಪ್ಪ ನಂದೆಣ್ಣವರ ಮುಂತಾದವರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka